ಕರ್ನಾಟಕ ವಿಧಾನ ಪರಿಷತ್ತು
9ನೇ ಅಧಿವೇಶನ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	12
ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು	:	ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	:	29.01.2021
ಉತ್ತರಿಸುವವರು	:	ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ಸಚಿವರು.

ಕ್ರಸಂ	ಪ್ರಶ್ನೆ	ಉತ್ತರ
ಅ	ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಜಾರಿಗೊಳಿಸುತ್ತಿರುವ ಯೋಜನೆಗಳು ಯಾವುವು; ಯೋಜನೆಗಳ ಮಾನದಂಡಗಳೇನು; (ವಿವರ ನೀಡುವುದು)	ಇಲಾಖೆಯಿಂದ ಜಾರಿಗೊಳಿಸುತ್ತಿರುವ ಯೋಜನೆಗಳ ವಿವರ ಹಾಗೂ ಮಾನದಂಡಗಳನ್ನು ಅನುಬಂಧ-01ರಲ್ಲಿ ಲಗತ್ತಿಸಿದೆ.
ಆ	ಕಳೆದ 3 ವರ್ಷಗಳಲ್ಲಿ ಈ ಯೋಜನೆಗಳಡಿ ಹಾಸನ ಜಿಲ್ಲೆಗೆ ಬಿಡುಗಡೆ ಮಾಡಿದ ಅನುದಾನವೆಷ್ಟು; ವೆಚ್ಚವಾದ ಮೊತ್ತ ಎಷ್ಟು; (ಸಂಪೂರ್ಣ ವಿವರ ನೀಡುವುದು)	ಕಳೆದ 3 ವರ್ಷಗಳಲ್ಲಿ ಹಾಸನ ಜಿಲ್ಲೆಗೆ ಬಿಡುಗಡೆಯಾದ ಅನುದಾನ ಹಾಗೂ ವೆಚ್ಚಗಳ ವಿವರವನ್ನು ಅನುಬಂಧ-02ರಲ್ಲಿ ಲಗತ್ತಿಸಿದೆ.
ಇ	ಈ ಯೋಜನೆಗಳ ಸದುಪಯೋಗ ಪಡೆದುಕೊಂಡ ಫಲಾನುಭವಿಗಳ ಸಂಖ್ಯೆ ಎಷ್ಟು? (ತಾಲ್ಲೂಕುವಾರು ವಿವರಗಳನ್ನು ಒದಗಿಸುವುದು)	ಹಾಸನ ಜಿಲ್ಲೆಯಲ್ಲಿ ಇಲಾಖಾ ಯೋಜನೆಗಳ ಸದುಪಯೋಗ ಪಡೆದುಕೊಂಡ ಫಲಾನುಭವಿಗಳ ವಿವರವನ್ನು ಅನುಬಂಧ-03ರಲ್ಲಿ ಲಗತ್ತಿಸಿದೆ.

ಸಂ:ಮಮಇ 20 ಸ್ತ್ರೀಮರ 2021

(ಶಶಿಕಲಾ ಅಣ್ಣಾಸಾಹೇಬ ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು.

ಅನುಬಂಧ-1

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಜಾರಿಗೊಳಿಸುತ್ತಿರುವ ಯೋಜನೆಗಳು ಹಾಗೂ ಯೋಜನೆಗಳ ಮಾನದಂಡಗಳ ವಿವರ

ಕ್ರ ಸಂ.	ಯೋಜನೆ/ಕಾರ್ಯಕ್ರಮಗಳ ವಿವರ	ಮಾನದಂಡಗಳು
1.	ಪೂರಕ ಪೌಷ್ಠಿಕ ಆಹಾರ:	ಅಂಗನವಾಡಿ ಕೇಂದ್ರಗಳಲ್ಲಿ ದಾಖಲಾದ ಫಲಾನುಭವಿಗಳಿಗೆ ಪೂರಕ ಪೌಷ್ಠಿಕ ಆಹಾರವನ್ನು ನೀಡಲಾಗುತ್ತಿದೆ. ಅಂಗನವಾಡಿ ಕೇಂದ್ರಕ್ಕೆ 06 ತಿಂಗಳಿಂದ 06 ವರ್ಷದ ಮಕ್ಕಳು/ ಗರ್ಭಿಣಿಯರು/ಬಾಣಂತಿಯರು, 11 ರಿಂದ 14 ವರ್ಷದ ಶಾಲೆಯಿಂದ ಹೊರಗುಳಿದ ಕಿಶೋರಿಯರು ದಾಖಲಾಗಬಹುದಾಗಿರುತ್ತದೆ.
2.	ಮಾತೃಪೂರ್ಣ ಯೋಜನೆ:	ಅಂಗನವಾಡಿ ಕೇಂದ್ರಕ್ಕೆ ದಾಖಲಾದ ಗರ್ಭಿಣಿಯರು/ಬಾಣಂತಿಯರು ಮಾತೃಪೂರ್ಣ ಯೋಜನೆ ಪ್ರಯೋಜನ ಪಡೆಯಲು ಅರ್ಹರಿರುತ್ತಾರೆ.
3.	ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರಿಗೆ ಮರಣ ಪರಿಹಾರ ನಿಧಿ	ಅಂಗನವಾಡಿಯಲ್ಲಿ ಕೆಲಸ ನಿರ್ವಹಿಸುತ್ತಿರುವ ಅಂಗನವಾಡಿ ಕಾರ್ಯಕರ್ತೆ/ಸಹಾಯಕಿ ಸೇವೆಯಲ್ಲಿದ್ದಾಗ ಮರಣ ಹೊಂದಿದ್ದಲ್ಲಿ ರೂ.50000/- ಮರಣ ಪರಿಹಾರ ನೀಡಲಾಗುತ್ತಿದೆ.
4.	ಅಪೌಷ್ಠಿಕ ಮಕ್ಕಳ ವೈದ್ಯಕೀಯ ವೆಚ್ಚ ಭರಿಸುವ ಯೋಜನೆ	ಅಂಗನವಾಡಿ ಕೇಂದ್ರದಲ್ಲಿ ದಾಖಲಾದ 06 ತಿಂಗಳಿಂದ 06 ವರ್ಷದ ಮಕ್ಕಳ ಆರೋಗ್ಯ ತಪಾಸಣೆಯಲ್ಲಿ ತೀವ್ರ ಅಪೌಷ್ಠಿಕ ಮಕ್ಕಳೆಂದು ಗುರುತಿಸಿದ ಮಕ್ಕಳಿಗೆ ವರ್ಷದಲ್ಲಿ ಗರಿಷ್ಠ ರೂ.2000/- ಮೀರದಂತೆ (ಪ್ರತಿ ಮಗುವಿಗೆ) ಖರ್ಚು ಭರಿಸಲಾಗುತ್ತಿದೆ.
5.	ಪ್ರಧಾನ ಮಂತ್ರಿ ಮಾತೃವಂದನಾ ಯೋಜನೆ	ಈ ಯೋಜನೆಯಡಿ ಅರ್ಜಿಯನ್ನು ಸಲ್ಲಿಸಿದ ಮೊದಲ ಮಗುವಿಗೆ ಗರ್ಭಿಣಿ / ಬಾಣಂತಿಯರು ಮೂರು ಕಂತುಗಳಲ್ಲಿ ರೂ.5000/- ಪಡೆಯಲು ಅರ್ಹರಿರುತ್ತಾರೆ. ಫಲಾನುಭವಿಯ ಮತ್ತು ಗಂಡನ ಆಧಾರ್ ಸಂಖ್ಯೆ ಕಡ್ಡಾಯವಾಗಿರುತ್ತದೆ. ಸರ್ಕಾರಿ/ ಅರೆಸರ್ಕಾರಿ ನೌಕರರು ಈ ಯೋಜನೆಯ ಪ್ರಯೋಜನ ಪಡೆಯಲು ಅರ್ಹರಿರುವುದಿಲ್ಲ. ಮೊದಲ ಕಂತು ಪಡೆಯಲು ಗರ್ಭಿಣಿ ಎಂದು ತಿಳಿದು ಬಂದ ತಕ್ಷಣ ಅಂಗನವಾಡಿ ಕೇಂದ್ರದಲ್ಲಿ ನೋಂದಣಿಯಾಗಿರಬೇಕು. ಎರಡನೇ ಕಂತು ಪಡೆಯಲು ಕನಿಷ್ಠ 01 ಎಎನ್‌ಸಿಯನ್ನು ಗರ್ಭಿಣಿ ಮಹಿಳೆ ಮಾಡಿಸಿರಬೇಕು. ಮೂರನೇ ಕಂತನ್ನು ಪಡೆಯಲು ಮಗು ಜನಿಸಿ ಮೊದಲ ಸುತ್ತಿನ ಚುಚ್ಚುಮದ್ದು ಹಾಕಿಸಿರಬೇಕು.
6.	**ಸ್ತ್ರೀಶಕ್ತಿ ಯೋಜನೆ**	
ಅ	ಸುತ್ತುನಿಧಿ: ಮೊತ್ತ ರೂ.5000/-	• ಗುಂಪು ರಚನೆಯಾಗಿ ಕನಿಷ್ಠ 6 ತಿಂಗಳಾಗಿರಬೇಕು • ಗುಂಪಿನಲ್ಲಿ ಕನಿಷ್ಠ 15 ರಿಂದ 20 ಸದಸ್ಯರಿರಬೇಕು • ಪ್ರತಿ ಸದಸ್ಯರು ಉಳಿತಾಯ ಪ್ರಾರಂಭಿಸಿರಬೇಕು. • ಪ್ರತಿವಾರ ಸದಸ್ಯರು ಸಭೆ ನಡೆಸಬೇಕು. • ಗುಂಪಿನ ಹೆಸರಿನಲ್ಲಿ ಬ್ಯಾಂಕ್ ಖಾತೆ ಹೊಂದಿರ ಬೇಕು. • ಗುಂಪಿನಲ್ಲಿ ನಿಗದಿಪಡಿಸಿದ ದಾಖಲಾತಿಗಳನ್ನು ನಿರ್ವಹಿಸುತ್ತಿರ

		ಬೇಕು. • ಗುಂಪಿನ ಆಂತರಿಕ ಸಾಲ ಹಾಗೂ ಸಾಲ ಮರುಪಾವತಿ ಉತ್ತಮವಾಗಿರ ಬೇಕು.
ಆ	ಹೆಚ್ಚುವರಿ ಸುತ್ತುನಿಧಿ ರೂ.5000/- ರಿಂದ ರೂ.25000/-	• ಗುಂಪಿನಲ್ಲಿ 15-20 ಸದಸ್ಯರಿರಬೇಕು • ಶೇ 50%ಕ್ಕಿಂತ ಹೆಚ್ಚು ಸದಸ್ಯರು ಬಡತನ ರೇಖೆಗಿಂತ ಕೆಳಗಿರಬೇಕು • ಯೋಜನೆಯ ಪ್ರಾರಂಭದಿಂದ ಸತತವಾಗಿ ಕನಿಷ್ಠ 10 ವರ್ಷ ಕಾರ್ಯನಿರತವಾಗಿರಬೇಕು. ಸಾಕ್ಷರರಾಗಿರಬೇಕು. • ಆಂತರಿಕ ಸಾಲ ಹಾಗೂ ಬ್ಯಾಂಕ ಸಾಲ ಪಡೆದಿರಬೇಕು. • ಸಾಲ ಮರುಪಾವತಿ ಉತ್ತಮವಾಗಿರಬೇಕು • ದಾಖಲಾತಿಗಳನ್ನು ಗುಂಪಿನ ಸದಸ್ಯರು ನಿರ್ವಹಿಸುತ್ತಿರಬೇಕು • ವಿವಿಧ ಇಲಾಖೆಗಳ ಕಾರ್ಯಕ್ರಮಗಳ ಸೌಲಭ್ಯ ಪಡೆದಿರಬೇಕು • ಮಾರುಕಟ್ಟೆ ಚಟುವಟಿಕೆಗಳಲ್ಲಿ ವಿಶೇಷವಾಗಿ ತೊಡಗಿರಬೇಕು • ಗೊಂಚಲು ಗುಂಪಿನ ಸದಸ್ಯರಾಗಿರಬೇಕು • ಪ್ರತಿ ವರ್ಷ ಗ್ರೇಡಿಂಗ್ ಮಾಡಬೇಕು • ಗುಂಪುಗಳು ಸಾಮಾಜಿಕ ಸುಧಾರಣೆ ಹಾಗೂ ಸಾಕ್ಷರತಾ ಕಾರ್ಯಕ್ರಮದಲ್ಲಿ ತೊಡಗಿಸಿಕೊಂಡಿರ ಬೇಕು
ಇ	ಆದಾಯೋತ್ಪನ್ನ ಚಟುವಟಿಕೆಗಳಿಗೆ ಪ್ರೋತ್ಸಾಹಧನ ರೂ.5000/-	ಗುಂಪಿನಿಂದ ಸುತ್ತುನಿಧಿ, ಉಳಿತಾಯದಿಂದ ಆಂತರಿಕ ಸಾಲ, ಬ್ಯಾಂಕ್ ಸಾಲಗಳನ್ನು ಬಳಸಿಕೊಂಡು ಆದಾಯೋತ್ಪನ್ನ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿರುವ ಗುಂಪುಗಳು.
ಈ	ಅಧಿಕ ಉಳಿತಾಯ ಮಾಡಿದ ಗುಂಪುಗಳಿಗೆ ಪ್ರೋತ್ಸಾಹಧನ ರೂ.15000/- ರೂ.20000/-	• ರೂ.75,000/-ಕ್ಕೂ ಮೇಲ್ಪಟ್ಟು ಉಳಿತಾಯ ಮಾಡಿರುವ ಗುಂಪುಗಳಿಗೆ ರೂ.15,000/- ಪ್ರೋತ್ಸಾಹಧನ. • ರೂ.1,00,000/-ಕ್ಕೂ ಮೇಲ್ಪಟ್ಟು ಉಳಿತಾಯ ಮಾಡಿರುವ ಗುಂಪುಗಳಿಗೆ ರೂ.20,000/- ಪ್ರೋತ್ಸಾಹಧನ.
ಉ	ಬ್ಯಾಂಕ್ ಸಾಲದ ಮೇಲಿನ ಬಡ್ಡಿಗೆ 6%ರ ಸಹಾಯಧನ:	ರೂ.25,000/- ರಿಂದ ರೂ.1.00 ಲಕ್ಷದವರೆಗೆ ಸಾಲವನ್ನು ಪಡೆಯುವ ಸ್ತ್ರೀಶಕ್ತಿ ಗುಂಪುಗಳಿಗೆ ಸಾಲದ ಮೇಲಿನ ಬಡ್ಡಿ ದರಕ್ಕೆ ಶೇ.6ರ ಸಹಾಯಧನ.
7.	ಬಾಲಕಿಯರ ವಸತಿನಿಲಯ	ಗ್ರಾಮಾಂತರ ಹಾಗೂ ಹಿಂದುಳಿದ ಪ್ರದೇಶಗಳ ಹೆಣ್ಣು ಮಕ್ಕಳಲ್ಲಿ ಶಿಕ್ಷಣ ಪ್ರೋತ್ಸಾಹಿಸಲು ಹಾಗೂ ಶಾಲೆ ಬಿಡುವ ಹೆಣ್ಣುಮಕ್ಕಳ ಸಂಖ್ಯೆಯನ್ನು ಕಡಿಮೆ ಮಾಡಲು ಇಲಾಖೆಯಿಂದ ಬಾಲಕಿಯರ ವಸತಿ ನಿಲಯಗಳನ್ನು ನಡೆಸಲಾಗುತ್ತಿದೆ. ಮಾನದಂಡಗಳು:- 1) ಗ್ರಾಮಾಂತರ ಪ್ರದೇಶಗಳ ಹೆಣ್ಣುಮಕ್ಕಳಿಗೆ ಶಿಕ್ಷಣ ಪ್ರೋತ್ಸಾಹಿಸಲು ಹೆಚ್ಚಿನ ಅಂಕ ಪಡೆದ ಮೆರಿಟ್ ಆಧಾರದ ವಿದ್ಯಾರ್ಥಿನಿಯರನ್ನು ದಾಖಲು ಮಾಡಲಾಗುವುದು. 2) ಬಡತನ ರೇಖೆಗಿಂತ ಕಡಿಮೆ ಆದಾಯ ಹೊಂದಿದ ಹೆಣ್ಣುಮಕ್ಕಳನ್ನು ದಾಖಲು ಮಾಡಿಕೊಳ್ಳಲಾಗುವುದು.
8.	ಕೌಟುಂಬಿಕ ದೌರ್ಜನ್ಯದಿಂದ	ಕೌಟುಂಬಿಕ ಸಂಬಂಧದಿಂದ ದೈಹಿಕ, ಲೈಂಗಿಕ, ಆರ್ಥಿಕ ಭಾವನಾತ್ಮಕ

	ಮಹಿಳೆಯರ ಸಂರಕ್ಷಣಾ ಕಾಯ್ದೆ 2005, ನಿಯಮ 2006	ಹಿಂಸೆಗಳನ್ನು ಅನುಭವಿಸುತ್ತಿರುವ ಮಹಿಳೆಯರನ್ನು ಸಂರಕ್ಷಿಸುವುದು ಮುಖ್ಯ ಉದ್ದೇಶವಾಗಿದೆ.
9.	"ಗೆಳತಿ"–ವಿಶೇಷ ಚಿಕಿತ್ಸಾ ಘಟಕ	ದೌರ್ಜನ್ಯಕ್ಕೆ ಒಳಗಾದ ಮಹಿಳೆಯರಿಗೆ ಒಂದೇ ಸೂರಿನಡಿ ಸಮಗ್ರ ಸೌಲಭ್ಯ ಅಂದರೆ, ವೈದ್ಯಕೀಯ ಚಿಕಿತ್ಸೆ ಮತ್ತು ನೆರವು, ಪೊಲೀಸ್ ನೆರವು, ಕಾನೂನು ನೆರವು ಹಾಗೂ ಸಮಾಲೋಚನೆ ವ್ಯವಸ್ಥೆಗಳನ್ನು ಒದಗಿಸಲು "ಗೆಳತಿ"–ವಿಶೇಷ ಚಿಕಿತ್ಸಾ ಘಟಕಗಳನ್ನು ರಾಜ್ಯದ ಎಲ್ಲಾ ಜಿಲ್ಲಾ ಆಸ್ಪತ್ರೆಗಳಲ್ಲಿ ಹಾಗೂ ಬೆಂಗಳೂರು ಮಹಾನಗರದಲ್ಲಿ ಬೌರಿಂಗ್ ಮತ್ತು ಲೇಡಿ ಕರ್ಜನ್ ಆಸ್ಪತ್ರೆ ಹಾಗೂ ಕೆ.ಸಿ.ಜನರಲ್ ಆಸ್ಪತ್ರೆಗಳಲ್ಲಿ ಪ್ರಾರಂಭಿಸಲಾಗಿರುತ್ತದೆ. ಈ ಘಟಕಗಳು ದಿನದ 24 ಗಂಟೆಗಳು ಕಾರ್ಯನಿರ್ವಹಿಸುತ್ತಿದೆ. **ಸರ್ಕಾರದ ಆದೇಶ ಸಂ:ಮಮಇ:03:ಮಮಅ:2018 (ಭಾಗ-1) ಬೆಂಗಳೂರು, ದಿ:02-11-2019ರಲ್ಲಿ** ಎಲ್ಲಾ ಜಿಲ್ಲೆಗಳಲ್ಲಿ ಅಸ್ತಿತ್ವದಲ್ಲಿರುವ "ಗೆಳತಿ"–ವಿಶೇಷ ಚಿಕಿತ್ಸಾ ಘಟಕ ಯೋಜನೆಯನ್ನು ಸ್ಥಗಿತಗೊಳಿಸಲು ಸೂಚಿಸಿದೆ. ಅದರಂತೆ ಕ್ರಮವಹಿಸಲಾಗಿದೆ.
10.	ಕೇಂದ್ರ ಸರ್ಕಾರದ ಸ್ವಾಧಾರಗೃಹ	ಕಷ್ಟಕರ ಪರಿಸ್ಥಿತಿಯಲ್ಲಿರುವ ಮಹಿಳೆಯರಿಗಾಗಿ ಆಶಯ, ಆಹಾರ, ಬಟ್ಟೆ, ತರಬೇತಿ ಹಾಗೂ ಶಿಕ್ಷಣ ನೀಡುವುದರ ಮೂಲಕ ಆರ್ಥಿಕವಾಗಿ, ಸಾಮಾಜಿಕವಾಗಿ ಸಶಕ್ತರಾಗುವಂತೆ ಮಾಡುವುದು ಯೋಜನೆಯ ಉದ್ದೇಶ. ನೋಂದಣಿಯಾಗಿ ಮೂರು ವರ್ಷವಾಗಿರುವ ಆರ್ಥಿಕವಾಗಿ ಸದೃಢವಾದ ಎಲ್ಲಾ ಮೂಲಭೂತ ಅನುಕೂಲತೆಗಳನ್ನು ಹೊಂದಿದ, ಮಹಿಳಾ ಕಲ್ಯಾಣ ಕ್ಷೇತ್ರದಲ್ಲಿ ಅನುಭವವಿರುವ ಸರ್ಕಾರೇತರ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಕೇಂದಗಳಲ್ಲಿ, ಸಲಹಾ ಕೇಂದ್ರ, ತರಬೇತಿ ಕೇಂದ್ರ ಹಾಗೂ ವೈದ್ಯಕೀಯ ಕೇಂದ್ರಗಳನ್ನು ನಡೆಸಲು ಅವಕಾಶವಿದೆ. ರಾಜ್ಯದಲ್ಲಿ ಪ್ರಸ್ತುತ 53 ಸ್ವಾಧಾರಗೃಹ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ.
11.	ಕೇಂದ್ರ ಸರ್ಕಾರದ ಒನ್ ಸ್ಟಾಪ್ ಸೆಂಟರ್(ಸಖಿ)	ದೌರ್ಜನ್ಯಕ್ಕೆ ಒಳಗಾದ ಮಹಿಳೆಯರಿಗೆ ಒಂದೇ ಸೂರಿನಡಿ ಸಮಗ್ರ ಸೌಲಭ್ಯ ಅಂದರೆ, ವೈದ್ಯಕೀಯ ಚಿಕಿತ್ಸೆ ಮತ್ತು ನೆರವು, ಪೊಲೀಸ್ ನೆರವು, ಕಾನೂನು ನೆರವು ಹಾಗೂ ಸಮಾಲೋಚನೆ ವ್ಯವಸ್ಥೆಗಳನ್ನು ಒದಗಿಸಲು ಭಾರತ ಸರ್ಕಾರವು ಮೊದಲನೇ ಹಂತದಲ್ಲಿ ದೇಶಾದ್ಯಂತ ಎಲ್ಲಾ ರಾಜ್ಯಗಳಲ್ಲಿ ತಲಾ ಒಂದರಂತೆ ಒನ್ ಸ್ಟಾಪ್ ಸೆಂಟರ್‌ನ್ನು ಸ್ಥಾಪಿಸಲು ಉದ್ದೇಶಿಸಿರುತ್ತದೆ.
12.	ಸಾಂತ್ವನ ಯೋಜನೆ	ವಿವಿಧ ರೀತಿಯ ದೌರ್ಜನ್ಯಕ್ಕೊಳಗಾದ (ವರದಕ್ಷಿಣೆ ಕಿರುಕುಳ, ಕೌಟುಂಬಿಕ ದೌರ್ಜನ್ಯ, ಅತ್ಯಾಚಾರ ಹಾಗೂ ಲೈಂಗಿಕ ಕಿರುಕುಳಕ್ಕೊಳಗಾದ) ಮಹಿಳೆಯರಿಗೆ ಸಮಾಲೋಚನೆ ಮತ್ತು ಅಗತ್ಯ ನೆರವನ್ನು ಒದಗಿಸುತ್ತಿದೆ. ಸಾಂತ್ವನ ಕೇಂದ್ರಗಳನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಅನುಷ್ಠಾನಗೊಳಿಸಲಾಗುತ್ತಿದೆ. ಮಾನದಂಡಗಳು 1)ಉತ್ತಮವಾಗಿ ಕೆಲಸ ನಿರ್ವಹಿಸುತ್ತಿರುವ ಸ್ವಯಂ ಸೇವಾಸಂಸ್ಥೆಯು ನೋಂದಣಿಯಾಗಿ ಕನಿಷ್ಠ 8 ವರ್ಷಗಳಾಗಿರಬೇಕು 2) ಮಹಿಳಾ ಕ್ಷೇತ್ರದಲ್ಲಿ ಗಣನೀಯವಾಗಿ ಸೇವೆ ಸಲ್ಲಿಸಿರಬೇಕು 3) ಸಂಸ್ಥೆಯು ಪ್ರತಿ ವರ್ಷ ನವೀಕರಣಗೊಂಡಿರಬೇಕು 4) ಸಂಸ್ಥೆಯು ಸೂಕ್ತವಾದ ಸ್ಥಳಾವಕಾಶ ಹಾಗೂ ಮೂಲಭೂತ ಸೌಲಭ್ಯಗಳನ್ನು ಹೊಂದಿರಬೇಕು 5) ಸಂಸ್ಥೆಯು ಆರ್ಥಿಕವಾಗಿ ಸದೃಢವಾಗಿರಬೇಕು 6) ಸಂಸ್ಥೆಯ ಲೆಕ್ಕಪತ್ರ ದಾಖಲೆಗಳು ವಾರ್ಷಿಕ

		ಪ್ರಗತಿ ವರದಿಗಳನ್ನು ಕ್ರಮಬದ್ಧವಾಗಿರಬೇಕು. ಈ ಎಲ್ಲಾ ಅರ್ಹತೆ ಹೊಂದಿರುವ ಸಂಸ್ಥೆಯವರಿಂದ ಪ್ರಸ್ತಾವನೆ ಪಡೆದು ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳ ಶಿಫಾರಸ್ಸಿನೊಂದಿಗೆ ಪ್ರಸ್ತಾವನೆ ನಿರ್ದೇಶನಾಲಯಕ್ಕೆ ಸಲ್ಲಿಸಲಾಗುವುದು.
13.	ಭಾಗ್ಯಲಕ್ಷ್ಮಿ ಯೋಜನೆ	ಈ ಯೋಜನೆಯ ಆರ್ಥಿಕ ಸೌಲಭ್ಯವನ್ನು ಹೆಣ್ಣು ಮಗುವಿಗೆ ಅದರ ತಾಯಿ/ತಂದೆ/ಪೋಷಕರ ಮೂಲಕ ಕೆಲವು ನಿಬಂಧನೆಗಳನ್ನು ಪೂರೈಸಿದಲ್ಲಿ ನೀಡಲಾಗುವುದು. ಬಡತನ ರೇಖೆಗಿಂತ ಕೆಳಗೆ ಇರುವ ಕುಟುಂಬಗಳಲ್ಲಿ 31.3.2006ರ ನಂತರ ಜನಿಸಿದ ಹೆಣ್ಣು ಮಕ್ಕಳು ಈ ಯೋಜನೆಯಡಿ ಫಲಾನುಭವಿಗಳಾಗಿ ನೋಂದಾಯಿಸಿಕೊಳ್ಳಲು ಅರ್ಹರಿರುತ್ತಾರೆ. ➢ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಗುರುತಿಸಿ ಶಾಶ್ವತ ಬಿಪಿಎಲ್ ಕಾರ್ಡ್/ಆದ್ಯತಾ ಕುಟುಂಬ ಪಡಿತರ ಚೀಟಿ ಹೊಂದಿರುವ ಬಡತನ ರೇಖೆಗಿಂತ ಕೆಳಗಿರುವ ಕುಟುಂಬದಲ್ಲಿ ಜನಿಸಿದ ಎರಡು ಹೆಣ್ಣು ಮಕ್ಕಳು ಯೋಜನೆಯಡಿ ನೋಂದಣಿ ಮಾಡಲು ಅರ್ಹರಿರುತ್ತಾರೆ. ➢ ಕುಟುಂಬದಲ್ಲಿ ಮಕ್ಕಳ ಸಂಖ್ಯೆ ಎರಡನ್ನು ಮೀರಿರಬಾರದು. ವಿಶೇಷ ಪ್ರಕರಣಗಳಲ್ಲಿ ಅಂದರೆ ಮೊದಲನೇ ಹೆರಿಗೆಯಲ್ಲಿ ಅವಳಿ ತ್ರಿವಳಿ ಹೆಣ್ಣು ಮಕ್ಕಳು ಜನಿಸಿದ್ದಲ್ಲಿ ಹಾಗು ಎರಡನೇ ಹೆರಿಗೆಯಲ್ಲಿ ಅವಳಿ/ತ್ರಿವಳಿ ಹೆಣ್ಣು ಮಕ್ಕಳು ಜನಿಸಿದ್ದಲ್ಲಿ ಈ ಎಲ್ಲಾ ಹೆಣ್ಣು ಮಕ್ಕಳಿಗೂ ಸೌಲಭ್ಯ ನೀಡುವುದು. ಈ ಸೌಲಭ್ಯವನ್ನು ಎರಡು ಹೆರಿಗೆಗೆ ಮಾತ್ರ ಮಿತಿಗೊಳಿಸುವುದು. ಇಂತಹ ಪ್ರಕರಣಗಳಲ್ಲಿ ಮಾತ್ರ ಕುಟುಂಬದ ಮಕ್ಕಳ ಸಂಖ್ಯೆ ಎರಡನ್ನು ಮೀರಿರಬಾರದು ಎಂಬ ನಿಯಮವನ್ನು ಸಡಿಲಿಸಲಾಗಿದೆ. ➢ ಈ ಯೋಜನೆಯನ್ನು ಗ್ರಾಮಾಂತರ ಮತ್ತು ನಗರ ಪ್ರದೇಶಗಳಲ್ಲೂ ಅನುಷ್ಠಾನಗೊಳಿಸಲಾಗುವುದು. ಅಂಗನವಾಡಿ ಕೇಂದ್ರಗಳು ಇಲ್ಲದೆ ಇರುವ ಪ್ರದೇಶಗಳಲ್ಲಿ ವಾಸಿಸುವ ಪೋಷಕರು ತಮ್ಮ ಸಮೀಪದ ಅಂಗನವಾಡಿ ಕೇಂದ್ರದಲ್ಲಿ ನೋಂದಣಿ ಮಾಡುವುದು. ಮಗುವಿನ ಜನನವನ್ನು ಕಡ್ಡಾಯವಾಗಿ ನೋಂದಾಯಿಸಿರಬೇಕು ಹಾಗೂ ಜನನ ಪ್ರಮಾಣ ಪತ್ರವನ್ನು ಹೊಂದಿರಬೇಕು.
14.	ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿ	6-15 ವರ್ಷದ ವಯೋಮಿತಿಯೊಳಗಿನ ಮಕ್ಕಳಲ್ಲಿ ಅಪ್ರತಿಮ ಶೌರ್ಯವನ್ನು ಪ್ರದರ್ಶಿಸಿ ಇತರರ ಪ್ರಾಣ ರಕ್ಷಣೆ ಮಾಡಿದ ಮಕ್ಕಳಿಗೆ ಪ್ರಶಸ್ತಿ ನೀಡುವ ಯೋಜನೆಯನ್ನು 2006-07ನೇ ಸಾಲಿನಿಂದ ಜಾರಿಗೆ ತರಲಾಗಿದೆ. ಸದರಿ ಯೋಜನೆಯ ಮಾರ್ಗಸೂಚಿಗಳನ್ನು ಪರಿಷ್ಕರಿಸಿ 2017-18ನೇ ಸಾಲಿನಿಂದ 6-18 ವರ್ಷದ ವಯೋಮಿತಿಯೊಳಗಿನ ಬಾಲಕರನ್ನು ಹೊಯ್ಸಳ ಪ್ರಶಸ್ತಿಗೆ ಮತ್ತು ಬಾಲಕಿಯರನ್ನು ಕೆಳದಿ ಚೆನ್ನಮ್ಮ ಪ್ರಶಸ್ತಿಗೆ ಆಯ್ಕೆ ಮಾಡಲು ಆದೇಶವನ್ನು ಹೊರಡಿಸಲಾಗಿದೆ. ಈ ಪ್ರಶಸ್ತಿಯು ರೂ. 10,000/-ಗಳ ನಗದು ಹಾಗೂ ಪ್ರಶಸ್ತಿ ಪತ್ರವನ್ನು ಒಳಗೊಂಡಿರುತ್ತದೆ. ಈ ಪ್ರಶಸ್ತಿಗಾಗಿ ಆಯ್ಕೆಯಾದ ಮಕ್ಕಳಿಗೆ ದ್ವಿತೀಯ ಪಿ.ಯು.ಸಿ. ಪೂರೈಸುವವರೆಗೂ ವಿದ್ಯಾಭ್ಯಾಸ ಮುಂದುವರೆಸಲು ಪ್ರತಿ ವರ್ಷ ರೂ.2000/-ಗಳ ಶಿಷ್ಯವೇತನವನ್ನು ನೀಡಲಾಗುವುದು.

15.	ಮಕ್ಕಳ ದಿನಾಚರಣೆ ಕಾರ್ಯಕ್ರಮ	ಅಂತರ ರಾಷ್ಟ್ರೀಯ ಮಕ್ಕಳ ವರ್ಷದ ಅಂಗವಾಗಿ ಭಾರತ ಸರ್ಕಾರವು 1979 ರಲ್ಲಿ ಜಾರಿಗೆ ತಂದ ರಾಷ್ಟ್ರ ಪ್ರಶಸ್ತಿಗೆ ಅನುಗುಣವಾಗಿ ರಾಜ್ಯ ಸರ್ಕಾರವು ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ನಿರತವಾಗಿರುವ ಕನಿಷ್ಠ 5 ವರ್ಷಗಳ ಕಾಲ ನಿರಂತರವಾಗಿ ಸೇವೆ ಸಲ್ಲಿಸಿದ 4 ಸಂಸ್ಥೆಗಳನ್ನು ಹಾಗೂ 4 ವ್ಯಕ್ತಿಗಳನ್ನು ಸನ್ಮಾನಿಸಲು ರಾಜ್ಯ ಪ್ರಶಸ್ತಿಯನ್ನು ಜಾರಿಗೆ ತಂದಿರುತ್ತದೆ. ಈ ಪ್ರಶಸ್ತಿಯನ್ನು ಪ್ರತಿ ವರ್ಷ ನವಂಬರ್-14 ರಂದು ಆಚರಿಸಲಾಗುವ ಮಕ್ಕಳ ದಿನಾಚರಣೆಯ ದಿನದಂದು ನೀಡಲಾಗುವುದು.
16.	ಮಹಿಳೆಯರ ಮತ್ತು ಮಕ್ಕಳ ಸಾಗಾಣಿಕೆ ನಿವಾರಣೆ	ಇದು ರಾಜ್ಯ ವಲಯದ ಕಾರ್ಯಕ್ರಮವಾಗಿರುತ್ತದೆ. ಮಹಿಳೆಯರ ಮತ್ತು ಮಕ್ಕಳ ಸಾಗಣೆಯು ಇತ್ತೀಚಿನ ದಿನಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ನಡೆಯುತ್ತಿದ್ದು ಇದು ಆತಂಕಕಾರಿಯಾದ ಬೆಳವಣಿಗೆಯಾಗಿರುತ್ತದೆ. ಈ ಪಿಡುಗನ್ನು ಸ್ಥಳೀಯ ಮಟ್ಟದಲ್ಲಿ ತಡೆಯುವುದು ಅನಿವಾರ್ಯವಾಗಿರುತ್ತದೆ. ಮಾನವ ಸಾಗಾಣಿಕೆಯನ್ನು ತಡೆಗಟ್ಟಲು ಮತ್ತು ಸಾಗಾಣಿಕೆಗೆ ಒಳಪಟ್ಟ ಮಹಿಳೆಯರ ಮತ್ತು ಮಕ್ಕಳ ಪುನರ್ವಸತಿ ಮಾಡುವುದು ನಾಗರಿಕ ಸಮಾಜದ ಪ್ರತಿಯೊಬ್ಬರ ಕರ್ತವ್ಯವಾಗಿರುತ್ತದೆ. ಈ ವ್ಯವಸ್ಥಿತ ಪಿಡುಗನ್ನು ನಿಯಂತ್ರಿಸಲು ಜಿಲ್ಲಾ, ತಾಲ್ಲೂಕು ಮತ್ತು ಗ್ರಾಮ ಮಟ್ಟದಲ್ಲಿ ಜಾಗೃತಿಯನ್ನು ಮೂಡಿಸುವುದು ಅಗತ್ಯವೆಂದು ಇಲಾಖೆಯು ಭಾವಿಸಿ ಮಹಿಳೆಯರ ಮತ್ತು ಮಕ್ಕಳ ಸಾಗಣೆ ನಿವಾರಣೆ ಯೋಜನೆಯನ್ನು 2006-07ರಲ್ಲಿ ಜಾರಿಗೆ ತರಲಾಗಿದೆ.
17.	ಉಜ್ವಲ ಯೋಜನೆ :	ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಮಂತ್ರಾಲಯವು ಮಹಿಳೆಯರ ಮತ್ತು ಮಕ್ಕಳ ಸಾಗಾಣಿಕೆ ತಡೆಗಟ್ಟಲು ಹಾಗೂ ಸಾಗಾಣಿಕೆಗೆ ಹಾಗೂ ವಾಣಿಜ್ಯ ಲೈಂಗಿಕ ದುರುಪಯೋಗಕ್ಕೆ ಒಳಪಟ್ಟವರನ್ನು ರಕ್ಷಿಸಲು, ಇವರಿಗೆ ಪುನರ್‌ವಸತಿ ಕಲ್ಪಿಸಲು ಮತ್ತು ಕುಟುಂಬದವರೊಂದಿಗೆ ಪುನರ್ ವಿಲೀನಗೊಳಿಸಲು ಉಜ್ವಲ ಎಂಬ ಸಮಗ್ರ ಯೋಜನೆಯನ್ನು ರೂಪಿಸಿರುತ್ತದೆ. ಟಾರ್ಗೆಟ್ ಗುಂಪು:- • ವಾಣಿಜ್ಯ ಲೈಂಗಿಕ ದುರುಪಯೋಗಕ್ಕಾಗಿ ತುತ್ತಾಗಬಹುದಾದ ಮಹಿಳೆಯರು ಮತ್ತು ಮಕ್ಕಳು • ವಾಣಿಜ್ಯ ಲೈಂಗಿಕ ದುರುಪಯೋಗಕ್ಕೆ ಒಳಪಟ್ಟಿರುವ ಮಹಿಳೆಯರು ಮತ್ತು ಮಕ್ಕಳು
18.	ಬೇಟಿ ಬಚಾವೋ ಬೇಟಿ ಪಡಾವೋ ಕಾರ್ಯಕ್ರಮ	ಸನ್ಮಾನ್ಯ ಪ್ರಧಾನ ಮಂತ್ರಿಗಳು "ಬೇಟಿ ಬಚಾವೋ ಬೇಟಿ ಪಡಾವೋ ಕಾರ್ಯಕ್ರಮ" ((**Beti Bachao, Beti Padhao**) ಎಂಬ ಯೋಜನೆಯನ್ನು 22, ಜನವರಿ 2015ರಂದು ರಾಷ್ಟ್ರೀಯ ಮಟ್ಟದಲ್ಲಿ ಜಾರಿಗೆ ತಂದಿರುತ್ತಾರೆ. ಕುಸಿಯುತ್ತಿರುವ ಮಕ್ಕಳ ಲಿಂಗ ಅನುಪಾತವನ್ನು (Declining CSR) ಉತ್ತಮ ಪಡಿಸುವುದು ಹಾಗೂ ಮಹಿಳೆಯರನ್ನು ಸಬಲೀಕರಣಗೊಳಿಸುವುದು, "ಬೇಟಿ ಬಚಾವೋ ಬೇಟಿ ಪಡಾವೋ ಯೋಜನೆಯ ಮುಖ್ಯ ಉದ್ದೇಶವಾಗಿರುತ್ತದೆ. ಈ ಯೋಜನೆಯನ್ನು ಅನುಷ್ಠಾನಗೊಳಿಸಲು, ಮಕ್ಕಳ ಲಿಂಗಾನುಪಾತ ಇಳಿಮುಖವಾಗುತ್ತಿರುವ ಕರ್ನಾಟಕ ರಾಜ್ಯದ ವಿಜಯಪುರ, ಬಾಗಲಕೋಟೆ, ಹಾವೇರಿ, ಗದಗ, ದಕ್ಷಿಣ ಕನ್ನಡ ಜಿಲ್ಲೆಗಳನ್ನು ಆಯ್ಕೆ ಮಾಡಲಾಗಿದೆ. ಈ ಯೋಜನೆಯನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯ ಆರೋಗ್ಯ ಮತ್ತು ಕುಟುಂಬ

		ಕಲ್ಯಾಣ ಸಚಿವಾಲಯ ಹಾಗೂ ಮಾನವ ಸಂಪನ್ಮೂಲ ಅಭಿವೃದ್ಧಿ ಸಚಿವಾಲಯಗಳ ಸಹಕಾರದಿಂದ ಅನುಷ್ಠಾನಗೊಳಿಸಲಾಗುತ್ತದೆ.
19.	ಸ್ವೀಕಾರ ಕೇಂದ್ರ ಹಾಗೂ ರಾಜ್ಯ ಮಹಿಳಾ ನಿಲಯ	ಅನೈತಿಕ ವ್ಯವಹಾರಗಳ (ತಡೆಗಟ್ಟುವ) ಅಧಿನಿಯಮ 1956 ನಿಯಮ 1989ರ ಅಡಿ ರಾಜ್ಯದಲ್ಲಿ 04 ಸ್ವೀಕಾರ ಕೇಂದ್ರಗಳು ಮತ್ತು 08 ರಾಜ್ಯ ಮಹಿಳಾ ನಿಲಯಗಳು ಸರ್ಕಾರದಿಂದ ನಡೆಸಲ್ಪಡುತ್ತಿವೆ. ಸ್ವೀಕಾರ ಕೇಂದ್ರಗಳು 18 ವರ್ಷದ ಮೇಲ್ಪಟ್ಟ ಮಹಿಳೆಯರಿಗೆ ತಾತ್ಕಾಲಿಕ ಪುನರ್ವಸತಿ ನೀಡುವ ಕೇಂದ್ರವಾಗಿರುತ್ತದೆ ಹಾಗೂ ರಾಜ್ಯ ಮಹಿಳಾ ನಿಲಯಗಳಲ್ಲಿ ದೀರ್ಘಾವಧಿ ಪುನರ್‌ವಸತಿ ಅವಶ್ಯವಿರುವ ಮಹಿಳೆಯರಿಗೆ ಆಶ್ರಯ ಮತ್ತು ಪೋಷಣೆ ಅಗತ್ಯವಿರುವ ಮಹಿಳೆಯರು ಸ್ವ-ಇಚ್ಛೆಯಿಂದ, ಸ್ವಯಂ ಸೇವಾ ಸಂಸ್ಥೆಗಳ ಮುಖಾಂತರ, ಯಾವುದೇ ವ್ಯಕ್ತಿಗಳ ಮುಖಾಂತರ ಹಾಗೂ ಅನೈತಿಕ ವ್ಯವಹಾರಗಳ (ತಡೆಗಟ್ಟುವ) ಅಧಿನಿಯಮ 1956ರ ಅಡಿಯಲ್ಲಿ ನ್ಯಾಯಾಲಯದಿಂದ ಪ್ರಕರಣವನ್ನು ದಾಖಲಿಸಿ ಕಳುಹಿಸಲ್ಪಟ್ಟ ಮಹಿಳೆಯರನ್ನು ದಾಖಲಿಸಿಕೊಳ್ಳಲಾಗುವುದು. ಸಂಸ್ಥೆಯಲ್ಲಿ ನಿವಾಸಿಯರಿಗೆ ಪಾಲನೆ, ಪೋಷಣೆ, ಊಟ, ವಸತಿ, ಬಟ್ಟೆ, ವೈದ್ಯಕೀಯ ಸೌಲಭ್ಯ, ರಕ್ಷಣೆ ಮತ್ತು ತರಬೇತಿಯನ್ನು ನೀಡಲಾಗುವುದು.
20.	ನಿರ್ಗತಿಕ ಮಕ್ಕಳ ಕುಟೀರ	ಅನಾಥ ಮತ್ತು ನಿರ್ಗತಿಕ ಮಕ್ಕಳ ಪಾಲನೆ/ಪೋಷಣೆ ಮಾಡುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿರುತ್ತದೆ. ಸದರಿ ಯೋಜನೆಯಡಿ ಕನಿಷ್ಠ 3 ವರ್ಷ ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸಿರುವ ನೋಂದಾಯಿತ ಸ್ವಯಂ ಸೇವಾ ಸಂಸ್ಥೆಗಳಿಗೆ 25 ಮಕ್ಕಳ ಒಂದು ಘಟಕದಂತೆ ಪಾಲನೆ ಹಾಗೂ ಪೋಷಣೆಗೆ ನಿರ್ಗತಿಕ ಮಕ್ಕಳ ಕುಟೀರವನ್ನು ತೆರೆಯಲು ಅನುಮತಿಯೊಂದಿಗೆ ಧನ ಸಹಾಯವನ್ನು ನೀಡಲಾಗುವುದು. ಈ ಯೋಜನೆಯಡಿ ಪ್ರತಿ ಮಗುವಿನ ನಿರ್ವಹಣೆಗಾಗಿ ಮಾಸಿಕ ರೂ.1000/-ಗಳ ಅನುದಾನವನ್ನು ನೀಡಲಾಗುತ್ತದೆ.

ಅನುಬಂಧ-1

ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ

ಕ್ರ ಸಂ.	ಯೋಜನೆಯ ಹೆಸರು	ಯೋಜನೆಯ ಸ್ವರೂಪ	ಫಲಾನುಭವಿಗಳ ಅರ್ಹತೆಗಳು	ನೆರವಿನ ಮಿತಿ	ಮಂಜೂರಾತಿ ಷರತ್ತುಗಳು	ಮಂಜೂರಾತಿ ಅಧಿಕಾರಿ
1	2	3	4	5	6	7
1	ಶ್ರವಣದೋಷವುಳ್ಳ ಮಕ್ಕಳಿಗಾಗಿ ವಿಶೇಷ ವಸತಿಯುತ ಶಾಲೆಗಳು	ಇಲಾಖೆಯಿಂದ ಶ್ರವಣದೋಷವುಳ್ಳ ಮಕ್ಕಳಿಗಾಗಿ ಬೆಂಗಳೂರು ನಗರ, ಮೈಸೂರು, ಗುಲ್ಬರ್ಗ, ಬಳ್ಳಾರಿ, ಬೆಳಗಾಂ ಜಿಲ್ಲೆಗಳಲ್ಲಿ 5 ಕಿವುಡು ಮಕ್ಕಳ ಶಾಲೆಗಳು ನಡೆಯುತ್ತಿವೆ. ಈ ಶಾಲೆಗಳಲ್ಲಿ ಮಕ್ಕಳಿಗೆ ಉಚಿತವಾಗಿ ವಸತಿ, ಊಟ ಮತ್ತು ಶಿಕ್ಷಣವನ್ನು ನೀಡಲಾಗುತ್ತಿದೆ. ಬೆಳಗಾಂನಲ್ಲಿ ಶ್ರವಣದೋಷವುಳ್ಳ ಹೆಣ್ಣು ಮಕ್ಕಳಿಗಾಗಿ ಇರುವ ಪ್ರತ್ಯೇಕ ಶಾಲೆಯಾಗಿರುತ್ತದೆ.	ಶ್ರವಣದೋಷವುಳ್ಳ ಮಕ್ಕಳಿಗೆ	–	–	ಶಾಲೆಯ ಅಧೀಕ್ಷಕರು
2	ಅಂಧ ಮಕ್ಕಳಿಗಾಗಿ ವಸತಿಯುತ ಶಾಲೆಗಳು:	ಇಲಾಖೆಯಿಂದ 4 ಅಂಧ ಮಕ್ಕಳ ಶಾಲೆಗಳು ಗುಲ್ಬರ್ಗಾ, ಮೈಸೂರು, ದಾವಣಗೆರೆ ಹಾಗೂ ಹುಬ್ಬಳ್ಳಿಗಳಲ್ಲಿ ನಡೆಯುತ್ತಿವೆ. ಈ ಶಾಲೆಗಳಲ್ಲಿ ದೃಷ್ಟಿದೋಷವುಳ್ಳ ಮಕ್ಕಳಿಗೆ ಉಚಿತ ಊಟ, ವಸತಿ ಮತ್ತು ಶಿಕ್ಷಣವನ್ನು ನೀಡಲಾಗುತ್ತಿದೆ. ದಾವಣಗೆರೆಯಲ್ಲಿ ಅಂಧ ಹೆಣ್ಣು ಮಕ್ಕಳಿಗಾಗಿ ಇರುವ ಪ್ರತ್ಯೇಕ ಶಾಲೆಯಾಗಿರುತ್ತದೆ.	ಅಂಧ ಮಕ್ಕಳಿಗೆ	–	–	ಶಾಲೆಯ ಅಧೀಕ್ಷಕರು
3	1982ರ ಅನುದಾನ ಸಂಹಿತೆಯಡಿ ವಿಶೇಷ ಶಾಲೆಗಳು	ವಿವಿಧ ವಿಕಲಚೇತನ ಮಕ್ಕಳಿಗೆ ಉಚಿತ ವಿದ್ಯಾಭ್ಯಾಸ, ಊಟ, ವಸತಿ ಮತ್ತು ಶೈಕ್ಷಣಿಕ ಸೌಲಭ್ಯಗಳನ್ನು ಕಲ್ಪಿಸಿ ಸಮಾಜದಲ್ಲಿ ಇತರೆ ಮಕ್ಕಳಂತೆ ವಿದ್ಯಾಭ್ಯಾಸವನ್ನು ಒದಗಿಸಲು ಉದ್ದೇಶಿಸಿರುವ ಸ್ವಯಂ ಸೇವಾ	• ಈ ಯೋಜನೆಯನ್ನು ಜಿಲ್ಲಾ ಪಂಚಾಯಿತಿಗಳ ವತಿಯಿಂದ ಸ್ವಯಂ ಸೇವಾ ಸಂಸ್ಥೆಗಳ	ಸ್ವಯಂ ಸೇವಾ ಸಂಸ್ಥೆಗಳ ಮೂಲಕ ವಿಶೇಷ ಶಾಲೆಗಳನ್ನು ನಡೆಸಲಾಗುತ್ತಿದೆ. ಕಾಲಕಾಲಕ್ಕೆ ಸರ್ಕಾರಿ ನೌಕರರಿಗೆ ಅನ್ವಯವಾಗುವ	• ಸಂಸ್ಥೆಯು ಯಾವುದೇ ಒಂದು ಜನಾಂಗದ ಲಾಭಕ್ಕಾಗಿ ವಿಶೇಷ ಶಾಲೆಯನ್ನು ನಡೆಸುತ್ತಿರಬಾರದು.	ಜಿಲ್ಲಾ ಪಂಚಾಯಿತಿ

		ಸಂಸ್ಥೆಗಳಿಗೆ ರಾಜ್ಯ ಸರ್ಕಾರವು ಜಿಲ್ಲಾ ಪಂಚಾಯಿತಿ ಮೂಲಕ ಧನ ಸಹಾಯ ನೀಡುವ ಯೋಜನೆ. ಸರ್ಕಾರದ ಆದೇಶ ಸಂಖ್ಯೆ:ಮಮಇ/383/ಪಿಹೆಚ್‌ಪಿ/2014 ದಿನಾಂಕ:03-05-2015ರಲ್ಲಿ ವಸತಿಯುತ ಮಕ್ಕಳ ಪಥ್ಯಾಹಾರಕ್ಕಾಗಿ ಹಾಲಿ ನೀಡುತ್ತಿರುವ ಅನುದಾನವನ್ನು ರೂ.600/-ರಿಂದ ರೂ.1000/-ಗಳಿಗೆ ಹೆಚ್ಚಿಸಲಾಗಿದೆ.	ಮುಖಾಂತರ ಜಾರಿಗೆ ತರಲಾಗುತ್ತಿದೆ. • ವಿವಿಧ ರೀತಿಯ ಅಂಗವಿಕಲತೆಗೆ ಸಂಬಂಧಿಸಿದಂತೆ ವಿಶೇಷ ಶಾಲೆಗಳಿಗೆ ರಾಜ್ಯ ಸರ್ಕಾರದಿಂದ ಶೇಕಡಾ 100 ರಷ್ಟು ಅನುದಾನವನ್ನು ಒದಗಿಸಲಾಗುತ್ತಿದೆ. • ಈ ಯೋಜನೆಯನ್ನು ಪಡೆಯಲು ಸ್ವಯಂ ಸೇವಾ ಸಂಸ್ಥೆಯು ಅಸ್ತಿತ್ವಕ್ಕೆ ಬಂದು ಕನಿಷ್ಠ 2 ವರ್ಷಗಳಾಗಿರಬೇಕು. • ಸ್ವಯಂ ಸೇವಾ ಸಂಸ್ಥೆಯು, ಸಾಕಷ್ಟು ಸಿಬ್ಬಂದಿವರ್ಗದೊಂದಿಗೆ ಅಗತ್ಯವಾದ ಮೂಲ ಸೌಲಭ್ಯ ಸಂಪನ್ಮೂಲ ಹಾಗೂ ಅನುಭವ ಮತ್ತು ಆರ್ಥಿಕವಾಗಿ ಸದೃಢವಾಗಿರಬೇಕು.	ವೇತನ ಶ್ರೇಣಿಯನ್ವಯ ವೇತನವನ್ನು ಹಾಗೂ ಆಹಾರ ವೆಚ್ಚ ಮುಂತಾದವುಗಳಿಗೆ ಅನುದಾನವನ್ನು ನೀಡಲಾಗುತ್ತಿದೆರ.	• ಸಂಸ್ಥೆಯು ಅಧಿಕೃತವಾಗಿ ರಚಿತವಾಗಿರುವ ಆಡಳಿತ ಮಂಡಳಿಯನ್ನು ಹೊಂದಿದ್ದು ಆಡಳಿತ ವರ್ಗದ ಅಧಿಕಾರ, ಕರ್ತವ್ಯಗಳು ಮತ್ತು ಜವಾಬ್ದಾರಿಗಳನ್ನು ಸ್ಪಷ್ಟ ಹಾಗೂ ಖಚಿತವಾಗಿ ಸಂಸ್ಥೆಯ ಬರವಣಿಗೆಯಲ್ಲಿರುವ ಸಂವಿಧಾನದಲ್ಲಿ ನಿರೂಪಿತವಾಗಿರಬೇಕು. • ಸಂಸ್ಥೆಯು ಯಾವುದೇ ಜಾತಿ, ಪಂಥ, ಮತ ಮತ್ತು ಭಾಷೆಗಳನ್ನು ಪರಿಗಣಿಸದೇ ಎಲ್ಲರಿಗೂ ಸೌಲಭ್ಯ ಒದಗಿಸಬೇಕು.	
4	ಸರ್ಕಾರೇತರ ಸಂಸ್ಥೆಗಳಿಂದ ನಡೆಸಲ್ಪಡುವ ಅಂಗವಿಕಲರ ವಿಶೇಷ ಶಾಲೆಗಳಿಗೆ ಆರ್ಥಿಕ ನೆರವು	• ಸಂವಿಧಾನದಲ್ಲಿ ಸರ್ವರಿಗೂ ಶಿಕ್ಷಣ ಸೂಚಿಸಿದಂತೆ ಅಂಗವಿಕಲ ಮಕ್ಕಳಿಗೂ ಶಿಕ್ಷಣದ ಹಕ್ಕನ್ನು ನೀಡುವುದು. • ಎಲ್ಲಾ ಅಂಗವಿಕಲ ಮಕ್ಕಳಿಗೂ ಶೈಕ್ಷಣಿಕ ಸೌಲಭ್ಯ ಒದಗಿಸುವುದು.	ಆಸಕ್ತ ಸ್ವಯಂ ಸೇವಾ ಸಂಸ್ಥೆಗಳು, ಸಹಾಯಧನದ ಮಂಜೂರಾತಿಗಾಗಿ ಪ್ರಸ್ತಾವನೆಯನ್ನು ಜಿಲ್ಲಾ ಅಂಗ ವಿಕಲರ	ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸುತ್ತಿರುವ ವಿಶೇಷ ಶಾಲೆಗಳಿಗೆ ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಸಹಾಯ ಧನ ನೀಡಲು 2010-11ನೇ ಸಾಲಿನಿಂದ	• ಸ್ವಯಂ ಸೇವಾ ಸಂಸ್ಥೆಯು ಭಾರತದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಪ್ರಕಾರ	ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು

		• ಅಂಗವಿಕಲ ಮಕ್ಕಳಲ್ಲಿ ಶೇ.100ರಷ್ಟು ಸಾಕ್ಷರತೆಯನ್ನು ಮೂಡಿಸುವುದು. • ಅಂಗವಿಕಲ ಮಕ್ಕಳ ಶೈಕ್ಷಣಿಕ ಕಾರ್ಯಕ್ರಮಕ್ಕೆ ಸ್ವಯಂ ಸೇವಾ ಸಂಸ್ಥೆಗಳಿಗೆ ಪ್ರೋತ್ಸಾಹ ನೀಡುವುದು. • ಕುಷ್ಠರೋಗ ನಿವಾರಿತ ಅಂಗವಿಕಲರಿಗೆ, ಮಾನಸಿಕ ಅಸ್ವಸ್ಥರಿಗೆ ಹಾಗೂ ತರಬೇತಿ ಪಡೆಯಲು ಅರ್ಹರಿರು ವಂತಹ ಬುದ್ಧಿಮಾಂದ್ಯರಿಗೆ ಔದ್ಯೋಗಿಕ ತರಬೇತಿ ಕೇಂದ್ರಗಳನ್ನು ಸ್ಥಾಪಿಸಿ 1 ಪುನರ್ವಸತಿಗೆ ನೆರವು ನೀಡುವುದು. 3 ವರ್ಷಕ್ಕಿಂತ ಮೇಲ್ಪಟ್ಟ ವಯೋಮಾನದ ಮಾನಸಿಕ ಅಸ್ವಸ್ಥ, ಸೆರಬ್ರಲ್ ಪಾಲ್ಸಿ, ಆಟಿಸಂ ಹಾಗೂ ತೀವ್ರತರನಾದ ಬುದ್ಧಿಮಾಂದ್ಯರ ಪಾಲನೆಗಾಗಿ ಬೆಂಗಳೂರು ನಗರದಲ್ಲಿ ಪ್ರಾಯೋಗಿಕವಾಗಿ 02 ಹಗಲು ಯೋಗಕ್ಷೇಮ ಕೇಂದ್ರಗಳನ್ನು ಸ್ಥಾಪಿಸಲು ಉದ್ದೇಶಿಸಲಾಗಿದ್ದು, ತನ್ಮೂಲಕ ಇಂತಹ ಮಕ್ಕಳ ಪೋಷಕರಿಗೆ ಸಮರ್ಪಕವಾಗಿ ಉದ್ಯೋಗದಲ್ಲಿ ತೊಡಗಿಸಿ ಕೊಳ್ಳಲು ಸಹಕಾರ ನೀಡಲಾಗುವುದು. ಪ್ರತಿ ಮಗುವಿಗೆ ಮಾಸಿಕ ರೂ.10,000/-ಗಳಂತೆ 25 ಮಕ್ಕಳಿಗೆ 10 ತಿಂಗಳಿಗೆ ಪಾವತಿಸಲಾಗುತ್ತಿದೆ. ಸದರಿ ಯೋಜನೆಯನ್ನು ಸರ್ಕಾರದ ಆದೇಶ ಹೊರಡಿಸಿದ ದಿನಾಂಕದಿಂದ ಜಾರಿಗೆ ತರಲಾಗಿದೆ.	ಕಲ್ಯಾಣಾಧಿಕಾರಿಗಳಿಗೆ ಸಲ್ಲಿಸಿದಲ್ಲಿ, ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳ ಅಧ್ಯಕ್ಷತೆಯಲ್ಲಿರುವ ಜಿಲ್ಲಾಮಟ್ಟದ ಸಮಿತಿಯ ಶಿಫಾರಸ್ಸಿನೊಂದಿಗೆ ಪ್ರಧಾನ ಕಛೇರಿಗೆ ಪ್ರಸ್ತಾವನೆ ಸಲ್ಲಿಸುವುದು. ಸಹಾಯಧನದ ಮಂಜೂರಾತಿ ಅಧಿಕಾರವು ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಮತ್ತು ಸರ್ಕಾರದ ವಿವೇಚನೆಗೆ ಒಳಪಟ್ಟಿರುತ್ತದೆ.	ಈ ಯೋಜನೆಯು ಜಾರಿಗೆ ಬಂದಿರುತ್ತದೆ. ಪ್ರಾರಂಭದಲ್ಲಿ ವಸತಿಯುತ ಶಾಲೆಗಳಿಗೆ ಪ್ರತೀ ಮಗುವಿಗೆ ಮಾಹೆಯಾನ ರೂ.2500/- ರಂತೆ ಹಾಗೂ ವಸತಿ ರಹಿತ ಶಾಲೆಗಳಿಗೆ ಮಗುವಿಗೆ ಮಾಹೆಯಾನ ರೂ. 2000/- ರಂತೆ ವರ್ಷದಲ್ಲಿ 10 ತಿಂಗಳ ಅವಧಿಗೆ ಅನುದಾನ ನೀಡಲಾಗುತ್ತಿತ್ತು. ಪ್ರಸ್ತುತ 2017-18ನೇ ಸಾಲಿನಿಂದ ಬುದ್ಧಿಮಾಂದ್ಯ ಮಗುವಿಗೆ ಪ್ರತಿ ಮಾಹೆಯಾನ ರೂ.6800/- ಹಾಗೂ ವಸತಿರಹಿತ ಮಗುವಿಗೆ ರೂ.6000/- ಹಾಗೂ ಶ್ರವಣದೋಷವುಳ್ಳ ಮತ್ತು ದೃಷ್ಟಿದೋಷವುಳ್ಳ ಮಕ್ಕಳಿಗೆ ಪ್ರತಿ ವಸತಿಯುತ ಮಗುವಿಗೆ ಮಾಹೆಯಾನ ರೂ.6200/- ಹಾಗೂ ವಸತಿರಹಿತ ಮಗುವಿಗೆ ರೂ.5200/- ಗಳಿಗೆ ಹೆಚ್ಚಿಸಿ ವರ್ಷದಲ್ಲಿ 10 ತಿಂಗಳ ಅವಧಿಗೆ ಅನುದಾನ ನೀಡಲಾಗುತ್ತಿತ್ತು. ಈ ಅನುದಾನ ಶಿಕ್ಷಕರ	ನೊಂದಣಿಯಾಗಿರುವ ಚಾರಿಟಬಲ್ ಟ್ರಸ್ಟ್ ಸೊಸೈಟಿ ಅಥವಾ ಸಮಾಜ ಸೇವೆಯಲ್ಲಿ ತೊಡಗಿರುವ ಸರ್ಕಾರೇತರ ಸಂಸ್ಥೆಯಾಗಿರಬೇಕು. ಸ್ವಯಂ ಸೇವಾ ಸಂಸ್ಥೆಯು ಅಂಗವಿಕಲರ ಹಕ್ಕುಗಳ ಕಾಯ್ದೆ-1995 ಸೆಕ್ಷನ್ 49, 50 ರಂತೆ ನೊಂದಣಿ ಮಾಡಿಸಿರಬೇಕು. • ವಿಕಲಚೇತನ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ವತಿಯಿಂದ ಅನುಮತಿ ಪಡೆದಂತಹ ಸಂಸ್ಥೆಗಳಿಗೆ ಮಾತ್ರವೇ ಸಹಾಯಧನ ನೀಡಲಾಗುವುದು. • ಸಂಸ್ಥೆಯು ವ್ಯಾಸಂಗಮಾಡು ತ್ತಿರುವ ವಿದ್ಯಾರ್ಥಿಗಳಿಂದ ಯಾವುದೇ ರೀತಿಯ ಶುಲ್ಕ, ದೇಣಿಗೆ, ವಂತಿಗೆ ಮುಂತಾದ	

				ಗೌರವಧನ, ಪಥ್ಯಾಹಾರ ಹಾಗೂ ಶಾಲಾ ನಿರ್ವಹಣಾ ವೆಚ್ಚ ಮುಂತಾದವುಗಳನ್ನು ಒಳಗೊಂಡಿರುತ್ತದೆ. 3 ವರ್ಷಕ್ಕಿಂತ ಮೇಲ್ಪಟ್ಟ ವಯೋಮಾನದ ಮಾನಸಿಕ ಅಸ್ವಸ್ಥ, ಸೆರಬ್ರಲ್ ಪಾಲ್ಸಿ, ಆಟಿಸಂ ಹಾಗೂ ತೀವ್ರತರನಾದ ಬುದ್ಧಿಮಾಂದ್ಯರ ಪಾಲನೆಗಾಗಿ ಬೆಂಗಳೂರು ನಗರದಲ್ಲಿ 02 ಹಗಲು ಯೋಗಕ್ಷೇಮ ಕೇಂದ್ರಗಳನ್ನು ಸ್ಥಾಪಿಸಿದ್ದು, ಪ್ರತಿ ಮಗುವಿಗೆ ಮಾಸಿಕ ರೂ.10,000/-ಗಳಂತೆ 25 ಮಕ್ಕಳಿಗೆ, 10 ತಿಂಗಳಿಗೆ ಪಾವತಿಸಲಾಗುತ್ತಿದೆ.	ವುಗಳನ್ನು ಸ್ವೀಕರಿಸತಕ್ಕದ್ದಲ್ಲ. • ಯಾವುದೇ ಸಂಸ್ಥೆಯು ಇಲಾಖೆಯಿಂದ ಅನುಮತಿ ಪಡೆದು ಶಾಲೆ ಪ್ರಾರಂಭಿಸಿದ 3 ವರ್ಷದ ಒಳಗೆ ಸಹಾಯಧನಕ್ಕೆ ಅರ್ಹತೆ ಪಡೆಯುವುದಿಲ್ಲ. • ಸಂಸ್ಥೆಯು ಯಾವುದೇ ಜಾತಿ ಮತ ಪರಿಗಣಿಸದೇ ಎಲ್ಲಾ ಅಂಗವಿಕಲ ಮಕ್ಕಳಿಗೂ ಮುಕ್ತವಾಗಿರಬೇಕು. • ಸಹಾಯಧನ ಪಡೆಯುವ ಸಂಸ್ಥೆಯು ರಾಜ್ಯ ಸರ್ಕಾರದ ಅಧಿಕಾರಿಗಳ ಅಥವಾ ಇಲಾಖೆಯಿಂದ ದೃಢೀಕ ರಿಸಲ್ಪಟ್ಟ ಯಾವುದೇ ವ್ಯಕ್ತಿಗಳ/ ಸಂಸ್ಥೆಗಳ ತಪಾಸಣೆಗೆ ಸಿದ್ಧ ವಾಗಿರಬೇಕು./ ಮುಕ್ತವಾಗಿರ ಬೇಕು. • ಶಾಲೆಯಲ್ಲಿ ಕನಿಷ್ಠ 25 ವಿದ್ಯಾರ್ಥಿಗಳು ದಾಖಲಾ ಗಿರಬೇಕು. ಶಾಲೆಯಲ್ಲಿ 20 ಕ್ಕಿಂತ	

					ಕಡಿಮೆ ಇದ್ದಲ್ಲಿಸಹಾಯಧನ ಪಡೆಯಲು ಅರ್ಹರಿರುವುದಿಲ್ಲ. • ಶಾಲೆಯು 220 ದಿನಗಳಿಗೆ ಕಡಿಮೆ ಇರದಂತೆ ಕಾರ್ಯನಿರ್ವಹಿಸ ಬೇಕು. • ಶಿಕ್ಷಕರ ಶೈಕ್ಷಣಿಕ ಅರ್ಹತೆಯು ಯೋಜನೆಯ ನಿಯಮಾನುಸಾರ ಇರತಕ್ಕದ್ದು.	
5	ವಿದ್ಯಾರ್ಥಿವೇತನ ಮತ್ತು ಪ್ರೋತ್ಸಾಹಧನ	ಈ ಕಾರ್ಯಕ್ರಮದಡಿ ಒಂದನೇ ತರಗತಿಯಿಂದ ಸ್ನಾತಕೋತ್ತರ ಪದವಿಯವರೆಗೆ ವ್ಯಾಸಂಗ ಮಾಡುತ್ತಿರುವ ಅರ್ಹ ವಿಕಲಚೇತನರಿಗೆ ವಿದ್ಯಾರ್ಥಿ ವೇತನ ನೀಡಲಾಗುತ್ತಿದೆ.	• ವಿಕಲಚೇತನ ವಿದ್ಯಾರ್ಥಿಗಳ ವಿದ್ಯಾರ್ಥಿ ವೇತನವನ್ನು ಮಂಜೂರು ಮಾಡಲು ಶಾಲಾ/ಕಾಲೇಜು ಮುಖ್ಯಸ್ಥರ ದೃಢೀಕರಣದೊಂದಿಗೆ ಅರ್ಜಿಗಳನ್ನು ಆಯಾ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಗೆ ಸಲ್ಲಿಸುವುದು. • ಉನ್ನತ ಶಿಕ್ಷಣದಲ್ಲಿ ಆಯಾ ವರ್ಷಗಳಲ್ಲಿ ಉತ್ತೀರ್ಣರಾದವರಿಗೆ ಮಾತ್ರ ಈ ಸೌಲಭ್ಯ ನೀಡಲಾಗುವುದು. • ವಿದ್ಯಾರ್ಥಿಗಳು	ಮಾಸಿಕ (ರೂ.ಗಳಲ್ಲಿ) • 1-5ನೇ ತರಗತಿ– ರೂ. 200/- • 6-10ನೇ ತರಗತಿ– ರೂ.400/- • ಪಿ.ಯು.ಸಿ – ರೂ.600/- • ಬಿ.ಎ/ಬಿ.ಎಸ್ಸಿ/ಬಿ.ಕಾಂ/ ಇತರೆ ಪದವಿಧರರು ಹಾಗೂ ಟಿ.ಸಿ.ಹೆಚ್/ ತತ್ಸಮಾನ – ರೂ.800/- • ಬಿಇ/ಬಿಟೆಕ್,ಎಂಬಿಬಿಎಸ್, ಎಲ್‌ಎಲ್‌ಬಿ/ ಡಿಪ್ಲಮೋ ಇನ್ ಪ್ರೊಫೇಷನಲ್	• ವಿದ್ಯಾರ್ಥಿಗಳು ವಿದ್ಯಾರ್ಥಿವೇತನವನ್ನು ಪಡೆಯಲು ಯಾವುದೇ ಆದಾಯಮಿತಿ ಇರುವುದಿಲ್ಲ. • ವಿಕಲಚೇತನ ವಿದ್ಯಾರ್ಥಿಗಳ ವಿದ್ಯಾರ್ಥಿ ವೇತನವನ್ನು ಮಂಜೂರು ಮಾಡಲು ಶಾಲಾ/ಕಾಲೇಜು ಮುಖ್ಯಸ್ಥರ ದೃಢೀಕರಣದೊಂದಿಗೆ ಅರ್ಜಿಗಳನ್ನು ಆಯಾ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಗೆ ಸಲ್ಲಿಸುವುದು.	ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು

			ಕಡ್ಡಾಯವಾಗಿ ಬ್ಯಾಂಕ್ ಖಾತೆಯನ್ನು ಹೊಂದಿರಬೇಕು.	ಅಂಡ್ ಇಂಜಿನಿಯರಿಂಗ್ ಇನ್‌ಪ್ಲಾಂಟ್ ಟ್ರೈನಿಂಗ್– ರೂ. 500/– • ಎಂ.ಎ, ಎಂ.ಎಸ್ಸಿ, ಎಂ.ಕಾಂ. ಎಲ್.ಎಲ್.ಎಂ. ಹಾಗೂ ತತ್ಸಮಾನ– ರೂ. 600/–		
6	ಪ್ರತಿಭಾವಂತ ಅಂಗವಿಕಲ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಬಹುಮಾನ ಯೋಜನ	ಪಬ್ಲಿಕ್ ಪರೀಕ್ಷೆಗಳಲ್ಲಿ ಶೇಕಡ 60 ಕ್ಕಿಂತಲೂ ಹೆಚ್ಚಿನ ಅಂಕಗಳನ್ನು ಪಡೆದ ಪ್ರತಿಭಾನ್ವಿತ ವಿಕಲಚೇತನ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ನೀಡಿ ವಿಕಲಚೇತನ ವಿದ್ಯಾರ್ಥಿಗಳನ್ನು ಪ್ರತಿಭಾವಂತರನ್ನಾಗಿಸಿ ಸಮಾಜದ ಮುಖ್ಯವಾಹಿನಿಗೆ ತರುವುದು ಯೋಜನೆಯ ಉದ್ದೇಶವಾಗಿರುತ್ತದೆ.	• ವ್ಯಾಸಂಗ ಮಾಡುತ್ತಿರುವ ಹಾಗೂ ಪರೀಕ್ಷೆಗೆ ಹಾಜರಾದ ವಿದ್ಯಾರ್ಥಿಯು ಶೇ.40ಕ್ಕಿಂತ ಹೆಚ್ಚು ಅಂಗವಿಕಲತೆ ಹೊಂದಿರಬೇಕು ಹಾಗೂ ವೈದ್ಯಕೀಯ ಪ್ರಾಧಿಕಾರದಿಂದ ಪಡೆದ ವೈದ್ಯಕೀಯ ಪ್ರಮಾಣ ಪತ್ರ ಪಡೆದಿರಬೇಕು. • ಪರೀಕ್ಷೆಗೆ ಹಾಜರಾದ ವಿದ್ಯಾರ್ಥಿಗಳು ಪ್ರಥಮ ಬಾರಿಗೆ ಉತ್ತೀರ್ಣರಾಗಿರಬೇಕು	ಮಾಸಿಕ(ರೂ.ಗಳಲ್ಲಿ) • ಎಸ್.ಎಸ್.ಎಲ್.ಸಿ– ರೂ. 3000/– • ಪಿ.ಯು.ಸಿ – ರೂ.5000/– • ಪದವಿ/ಟಿ.ಸಿಹೆಚ್ – ರೂ.8000/– • ಬಿ.ಇಡಿ/ಸ್ನಾತಕೋತರ ಪದವಿ/ ಎಂ.ಎ/ಎಂ.ಕಾಂ/ಎಂ. ಎಸ್ಸಿ ಹಾಗೂ ಪದವಿ ನಂತರ 2 ವರ್ಷಗಳ ಕೋರ್ಸ್‌ಗೆ – ರೂ. 10,000/– • ಕೃಷಿ ಪದವಿ ಇಂಜಿನಿಯರಿಂಗ್/ಪಶು ವೈದ್ಯಕೀಯ/ ಎಂ.ಇಡಿ ವೈದ್ಯಕೀಯ ಪದವಿ– ರೂ.12,000/–	• ಶೇ.60%ಕ್ಕಿಂತಲೂ ಹೆಚ್ಚಿನ ಅಂಕಗಳಿಸಿದ ವಿದ್ಯಾರ್ಥಿಗಳು ಮಾತ್ರ ಈ ಯೋಜನೆಗೆ ಅರ್ಹರಾಗಿರುತ್ತಾರೆ. • ಅರ್ಜಿಯನ್ನು ವ್ಯಾಸಂಗ ಮಾಡುತ್ತಿರುವ ಶಾಲೆ/ಕಾಲೇಜು ಮುಖ್ಯಸ್ಥರ ಮೂಲಕ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಗೆ ಸಲ್ಲಿಸಬೇಕು.	ಆಯಾ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು

7	ಶುಲ್ಕ ಮರುಪಾವತಿ	ಎಸ್.ಎಸ್.ಎಲ್.ಸಿ. ನಂತರ ಉನ್ನತ ಶಿಕ್ಷಣ, ವೃತ್ತಿ ಶಿಕ್ಷಣ, ತಾಂತ್ರಿಕ ಶಿಕ್ಷಣ, ಸ್ನಾತಕೋತ್ತರ, ಔದ್ಯೋಗಿಕ ಶಿಕ್ಷಣಗಳಿಗೆ ನಿಯಮಾನುಸಾರ ಆಯ್ಕೆಯಾಗುವ ವಿಕಲಚೇತನ ವಿದ್ಯಾರ್ಥಿಗಳಿಗೆ ಸರ್ಕಾರವು ನಿಗದಿಪಡಿಸಿರುವ ಪರೀಕ್ಷಾ ಶುಲ್ಕ, ಬೋಧನಾ ಶುಲ್ಕ, ಪ್ರಯೋಗಾಲಯ ಶುಲ್ಕ, ಕ್ರೀಡಾ ಶುಲ್ಕ ಹಾಗೂ ಗ್ರಂಥಾಲಯ ಶುಲ್ಕಗಳನ್ನು ಮರು ಪಾವತಿಸುವ ಯೋಜನೆಯು ಜಾರಿಗೆ ಬಂದಿರುತ್ತದೆ.	• ವಿಕಲಚೇತನರು ಭಾರತದ ಪ್ರಜೆಯಾಗಿದ್ದು, ಅರ್ಜಿ ಸಲ್ಲಿಸುವ ದಿನಾಂಕಕ್ಕೆ ಕನಿಷ್ಠ 5 ವರ್ಷ ಕರ್ನಾಟಕದಲ್ಲಿ ವ್ಯಾಸಂಗ ಮಾಡಿರ ತಕ್ಕದ್ದು. • ಸರ್ಕಾರಿ, ಸ್ಥಳೀಯ ಸಂಸ್ಥೆ, ಅನುದಾನಿತ ಸಂಸ್ಥೆ, ಸರ್ಕಾರದ ಮಾನ್ಯತೆ ಪಡೆದ ಅನುದಾನ ಸಹಿತ ಮತ್ತು ಅನುದಾನ ರಹಿತ ಖಾಸಗಿ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಎಸ್.ಎಸ್.ಎಲ್.ಸಿ ನಂತರದ ವಿಕಲಚೇತನ ವಿದ್ಯಾರ್ಥಿಗಳು ಶುಲ್ಕ ಮರು ಪಾವತಿ ಪಡೆಯಲು ಅರ್ಹರಿರುತ್ತಾರೆ. • ಯಾವ ಸಂಸ್ಥೆಗಳು ವಿಕಲ ಚೇತನ ವಿದ್ಯಾರ್ಥಿಗಳಿಗೆ ಶುಲ್ಕವನ್ನು ವಿಧಿಸುವುದಿಲ್ಲವೋ ಅಂತಹ ಸಂಸ್ಥೆಯ ವಿದ್ಯಾರ್ಥಿಗಳು ಶುಲ್ಕ ಮರುಪಾವತಿಗೆ	–	• ಯೋಜನೆಯಡಿ ಸೌಲಭ್ಯ ಪಡೆಯುವ ವಿದ್ಯಾರ್ಥಿಗಳಿಗೆ ಯಾವುದೇ ಆದಾಯ ಮಿತಿ ಇರುವುದಿಲ್ಲ. • ವಿದ್ಯಾರ್ಥಿಯು ವ್ಯಾಸಂಗ ಮಾಡುವ ಅವಧಿಯಲ್ಲಿ 2ನೇ ವರ್ಷದಿಂದ ನೀಡುವಾಗ ಹಿಂದಿನ ವರ್ಷದಲ್ಲಿ ಕನಿಷ್ಠ ಶೇ.80ರಷ್ಟು ಹಾಜರಾತಿ ಹೊಂದಿರಬೇಕು. • ಅಂಗವಿಕಲರ ಅಧಿನಿಯಮದಲ್ಲಿ ಸೂಚಿಸಿರುವ ಹಾಗೂ ವೈದ್ಯಕೀಯ ಮಂಡಳಿಯವರು ಶಿಫಾರಸ್ಸು ಮಾಡಿರುವ ವೈದ್ಯಕೀಯ ಪ್ರಮಾಣ ಪತ್ರದಲ್ಲಿ ಸೂಚಿಸಿರುವ ವಿಕಲಚೇತನ ಅಭ್ಯರ್ಥಿಗಳು ಮಾತ್ರ ಯೋಜನೆಗೆ ಅರ್ಹರಿರುತ್ತಾರೆ.	ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು

			ಅರ್ಹರಿರುವುದಿಲ್ಲ. • ವಿಕಲಚೇತನ ವಿದ್ಯಾರ್ಥಿಗಳು ಹಿಂದಿನ ವರ್ಷದ ಪಬ್ಲಿಕ್ ಪರೀಕ್ಷೆಯಲ್ಲಿ ಎಲ್ಲಾ ವಿಷಯಗಳಲ್ಲಿ ಉತ್ತೀರ್ಣರಾಗದಿದ್ದಲ್ಲಿ ಮುಂದಿನ ವರ್ಷದಲ್ಲಿ ಶುಲ್ಕ ಮರುಪಾವತಿಗೆ ಅರ್ಹರಾಗುವುದಿಲ್ಲ. ಆದರೆ, ಮುಂದಿನ ಶೈಕ್ಷಣಿಕ ವರ್ಷದಲ್ಲಿ ಹಿಂದಿನ ಬಾಕಿ ವಿಷಯಗಳು ಸೇರಿದಂತೆ ಎಲ್ಲಾ ವಿಷಯಗಳಲ್ಲಿ ಉತ್ತೀರ್ಣರಾಗಿದ್ದಲ್ಲಿ ಮಾತ್ರ ನಂತರದ ವರ್ಷದಲ್ಲಿ ಶುಲ್ಕ ಮರುಪಾವತಿಗೆ, ಆ ಕೋರ್ಸ್‌ಗಳಲ್ಲಿ ಕ್ಯಾರಿ ಓವರ್ ಪದ್ಧತಿ ಜಾರಿಯಿದ್ದು ಮುಂದಿನತರಗತಿಗೆ/ ವರ್ಷಕ್ಕೆ ಪ್ರವೇಶ ಅವಕಾಶವಿದ್ದಲ್ಲಿ ಅಂತಹವರು ಶುಲ್ಕ ಮರುಪಾವತಿಗೆ ಅರ್ಹರಿರುತ್ತಾರೆ. • ಪರೀಕ್ಷಾ ಶುಲ್ಕವನ್ನು ವರ್ಷಕ್ಕೆ ಒಂದು ಸಲ			

			ಮಾತ್ರ ಮರುಪಾವತಿಸಲಾಗುವುದು. ಅನುತ್ತೀರ್ಣರಾದ ಅಭ್ಯರ್ಥಿಗಳು ಹಾಗೂ ಸಪ್ಲಿಮೆಂಟರಿ ಪರೀಕ್ಷೆ ತೆಗೆದುಕೊಳ್ಳುವ ಅಭ್ಯರ್ಥಿಗಳು ಶುಲ್ಕ ಮರುಪಾವತಿಗೆ ಅರ್ಹರಾಗುವುದಿಲ್ಲ. • ಬೇರೆ ಇಲಾಖೆ ಹಾಗೂ ಇತರೆ ಮೂಲಗಳಿಂದ ಶುಲ್ಕವನ್ನು ಪಡೆದ ವಿದ್ಯಾರ್ಥಿಗಳಿಗೆ ಈ ಯೋಜನೆಯಡಿ ಶುಲ್ಕ ಮರುಪಾವತಿಗೆ ಅವಕಾಶವಿರುವುದಿಲ್ಲ.			
8	ಸ್ಪರ್ಧಾಚೇತನ	ವಿಶೇಷ ಸಾಮರ್ಥ್ಯ / ಭಿನ್ನ ಸಾಮರ್ಥ್ಯದ ವಿದ್ಯಾವಂತ ನಿರುದ್ಯೋಗಿ ವ್ಯಕ್ತಿಗಳಿಗೆ ಐ.ಎ.ಎಸ್ / ಕೆ.ಎ.ಎಸ್ / ಇತರೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ನೀಡುವ ಯೋಜನೆ ಇದಾಗಿದ್ದು, ವಿದ್ಯಾವಂತ ನಿರುದ್ಯೋಗಿ ಅಂಗವಿಕಲರಿಗೆ ಗುಣಾತ್ಮಕ ತರಬೇತಿಯನ್ನು ನೀಡಿ ಅವರನ್ನು ಸಾಮಾನ್ಯರಂತೆ ಉನ್ನತ ಹುದ್ದೆಗಳನ್ನು ಪಡೆಯಲು ಅವಕಾಶ ನೀಡಿ, ಸಮಾಜದ ಮುಖ್ಯವಾಹಿನಿಗೆ ಕರೆದೊಯ್ಯುವುದಾಗಿದೆ. • ಕೇಂದ್ರ ಲೋಕಸೇವಾ ಆಯೋಗದಿಂದ (ಯು.ಪಿ.ಎಸ್.ಸಿ) ನಡೆಸುವ ಗ್ರೂಪ್	• ನಿರುದ್ಯೋಗಿ ಅಂಗವಿಕಲ ವಿದ್ಯಾರ್ಥಿಯು ಶೇ.40 ಕ್ಕಿಂತ ಹೆಚ್ಚಿನ ಅಂಗವಿಕಲತೆ ಹೊಂದಿರಬೇಕು. • ನಿರುದ್ಯೋಗಿ ಅಂಗವಿಕಲ ವಿದ್ಯಾರ್ಥಿಯು ಕನಿಷ್ಠ 18 ವರ್ಷದಿಂದ ನೇಮಕಾತಿ	• ಸದರಿ ಯೋಜನೆಗೆ ರಾಜ್ಯ ಸರ್ಕಾರವು ಅನುದಾನವನ್ನು ಒದಗಿಸುತ್ತದೆ. ತರಬೇತಿಗೆ ನಿಗದಿಗೊಳಿಸುವ ಶುಲ್ಕ ಮತ್ತು ಇತರೆ ಖರ್ಚುಗಳನ್ನು ಒಳಗೊಂಡಂತೆ ಸಹಾಯಧನವನ್ನು ಅಂಗವಿಕಲ ವಿದ್ಯಾರ್ಥಿಯು ತರಬೇತಿ	• ನಿರುದ್ಯೋಗಿ ಅಂಗವಿಕಲ ವಿದ್ಯಾರ್ಥಿಯು ಶೇ.40 ಕ್ಕಿಂತ ಹೆಚ್ಚಿನ ಅಂಗವಿಕಲತೆ ಹೊಂದಿರಬೇಕು. • ನಿರುದ್ಯೋಗಿ ಅಂಗವಿಕಲ ವಿದ್ಯಾರ್ಥಿಯು ಕನಿಷ್ಠ 18 ವರ್ಷದಿಂದ ನೇಮಕಾತಿ ಪ್ರಾಧಿಕಾರಿಗಳು	• ಆಯಾ ಜಿಲ್ಲಾ ಅಂಗವಿಕಲ ವ್ಯಕ್ತಿಗಳ ಕಲ್ಯಾಣಾಧಿಕಾರಿಗಳು • ರಾಜ್ಯ ಸರ್ಕಾರದ ಇತರೆ ಇಲಾಖೆಗಳಡಿ ಗುರುತಿಸಲ್ಪಟ್ಟ ಪೂರ್ವ

		'ಎ' ಮತ್ತು 'ಬಿ' ವೃಂದದ ಪರೀಕ್ಷೆಗಳಿಗೆ ತರಬೇತಿ ಪಡೆಯಲು ಸಹಾಯಧನ ನೀಡುವುದು. • ಕರ್ನಾಟಕ ಲೋಕಸೇವಾ ಆಯೋಗದಿಂದ ನಡೆಸುವ (ಕೆ.ಪಿ.ಎಸ್.ಸಿ) ಗ್ರೂಪ್ 'ಎ' ಮತ್ತು 'ಬಿ' ವೃಂದದ ಪರೀಕ್ಷೆಗಳಿಗೆ ತರಬೇತಿ ಪಡೆಯಲು ಸಹಾಯಧನ ನೀಡುವುದು. • ಬ್ಯಾಂಕ್ / ಜೀವವಿಮಾ ನಿಗಮ, ಸರ್ಕಾರಿ ಸ್ವಾಮ್ಯದ ಉದ್ದಿಮೆಗಳು ಮತ್ತು ಇತರೆ ಸಂಸ್ಥೆಗಳು ನಡೆಸುವ ಅಧಿಕಾರಿ / ಪ್ರಥಮ ದರ್ಜೆ / ದ್ವಿತೀಯ ದರ್ಜೆ ಹುದ್ದೆಗಳಿಗೆ ನಡೆಸುವ ಪರೀಕ್ಷೆಗಳಿಗೆ ತರಬೇತಿ ಪಡೆಯಲು ಸಹಾಯಧನ ನೀಡುವುದು.	ಪ್ರಾಧಿಕಾರಿಗಳು ಹೊರಡಿಸುವ ಅಧಿಸೂಚನೆಯಲ್ಲಿ ನಿಗದಿಗೊಳಿಸಿರುವ ಗರಿಷ್ಠ ವಯೋಮಿತಿಯೊಳಗಿರಬೇಕು • ಕರ್ನಾಟಕದಲ್ಲಿ ಕನಿಷ್ಠ 10 ವರ್ಷಗಳು ವಾಸವಾಗಿರತಕ್ಕದ್ದು. • ಆದಾಯ ಮಿತಿ ಇರುವುದಿಲ್ಲ. • ನಿರುದ್ಯೋಗಿ ಅಂಗವಿಕಲರ ವಿದ್ಯಾರ್ಥಿಯು ಪಿಯುಸಿ ನಂತರ ವ್ಯಾಸಂಗವನ್ನು ಹೊಂದಿರಬೇಕು ಹಾಗೂ ನೇಮಕಾತಿ ಪ್ರಾಧಿಕಾರಿಗಳು ಹುದ್ದೆಗಳಿಗೆ ಹೊರಡಿಸುವ ಅಧಿಸೂಚನೆಯಂತೆ ಶೈಕ್ಷಣಿಕ ಅರ್ಹತೆಯನ್ನು ಹೊಂದಿರಬೇಕು.	ಪಡೆಯುತ್ತಿರುವ ಕೇಂದ್ರಕ್ಕೆ ನೀಡಲಾಗುವುದು. • ಆಯಾ ಕೋರ್ಸ್‌ಗಳಿಗೆ ಸಂಬಂಧಿಸಿದಂತೆ ಮಾಸಿಕವಾಗಿ ನಿಗದಿಪಡಿಸಿರುವ ಭತ್ಯೆ ರೂ.8000/–, ರೂ.6000/– ರೂ.4000/– ಹಾಗೂ ರೂ.2000/–ಗಳ ಸಹಾಯಧನವನ್ನು ಅಂಗವಿಕಲ ವಿದ್ಯಾರ್ಥಿಯು ತರಬೇತಿ ಪಡೆಯುತ್ತಿರುವ ಕೇಂದ್ರಕ್ಕೆ ನೀಡಲಾಗುವುದು.	ಹೊರಡಿಸುವ ಅಧಿಸೂಚನೆಯಲ್ಲಿ ನಿಗದಿಗೊಳಿಸಿರುವ ಗರಿಷ್ಠ ವಯೋಮಿತಿಯೊಳಗಿರಬೇಕು. • ಕರ್ನಾಟಕದಲ್ಲಿ ಕನಿಷ್ಠ 10 ವರ್ಷಗಳು ವಾಸವಾಗಿರತಕ್ಕದ್ದು. • ಆದಾಯ ಮಿತಿ ಇರುವುದಿಲ್ಲ. • ನಿರುದ್ಯೋಗಿ ಅಂಗವಿಕಲರ ವಿದ್ಯಾರ್ಥಿಯು ಪಿಯುಸಿ ನಂತರ ವ್ಯಾಸಂಗವನ್ನು ಹೊಂದಿರಬೇಕು ಹಾಗೂ ನೇಮಕಾತಿ ಪ್ರಾಧಿಕಾರಿಗಳು ಹುದ್ದೆಗಳಿಗೆ ಹೊರಡಿಸುವ ಅಧಿಸೂಚನೆಯಂತೆ ಶೈಕ್ಷಣಿಕ ಅರ್ಹತೆಯನ್ನು ಹೊಂದಿರಬೇಕು.	ಪರೀಕ್ಷಾ ತರಬೇತಿ ಕೇಂದ್ರಗಳು (ಪ್ರಿ ಎಕ್ಸಾಮಿನೇಷನ್ ಟ್ರೈನಿಂಗ್ ಸೆಂಟರ್) • ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ ಗುರುತಿಸಲ್ಪಟ್ಟ ಖಾಸಗಿ / ಅನುದಾನಿತ ಸ್ವಯಂ ಸೇವಾ ಸಂಸ್ಥೆಗಳು ನಡೆಸುತ್ತಿರುವ ತರಬೇತಿ ಕೇಂದ್ರಗಳು.
9	ಸಮಾಜ ಸೇವಾ ಸಂಕೀರ್ಣ ಮತ್ತು ಮಂದಮತಿ ಮಹಿಳೆಯರ	ನಿರ್ಗತಿಕ ಪುರುಷ ಬುದ್ಧಿಮಾಂದ್ಯರಿಗೆ ಹಾಗೂ ಮಂದಮತಿ ಮಹಿಳೆಯರಿಗೆ ಊಟ, ವಸತಿ, ವೈದ್ಯಕೀಯ ಸೌಲಭ್ಯ, ರಕ್ಷಣೆ ಒದಗಿಸುವ ಉದ್ದೇಶದಿಂದ ಸಮಾಜ	• 18 ವರ್ಷಕ್ಕಿಂತ ಮೇಲ್ಪಟ್ಟ ಪೋಷಕರಿಲ್ಲದ ಪುರುಷ ಬುದ್ಧಿ	ಸರ್ಕಾರಿ ಸಂಸ್ಥೆಯಾಗಿದ್ದು, ನಿವಾಸಿಗಳಿಗೆ ಉಚಿತ ಊಟ, ವಸತಿ, ಔಷದೋಪಚಾರ	• ನಿಮ್ಹಾನ್ಸ್‌ನಿಂದ ಶಿಫಾರಸ್ಸು ಮಾಡಲಾದ ನಿರ್ಗತಿಕ ಬುದ್ಧಿಮಾಂದ್ಯರಾಗಿ	ಸಂಸ್ಥೆಯ ಮುಖ್ಯಸ್ಥರು

	ಅನುಪಾಲನಾ ಗೃಹಗಳು	ಸೇವಾ ಸಂಕೀರ್ಣವು ಬೆಂಗಳೂರಿನಲ್ಲಿ ಸ್ಥಾಪಿತ ವಾಗಿದೆ. ಈ ಸಂಕೀರ್ಣದಲ್ಲಿ ಸುಮಾರು 100 ಫಲಾನುಭವಿಗಳಿಗೆ ಊಟ, ವಸತಿ, ರಕ್ಷಣೆ, ವೈದ್ಯಕೀಯ ಸೌಲಭ್ಯ ಒದಗಿಸಲಾಗಿದೆ.	ಮಾಂದ್ಯ ವ್ಯಕ್ತಿಗಳನ್ನು ದಾಖಲು ಮಾಡಿಕೊಳ್ಳಲಾಗುವುದು. • ಸದರಿ ವ್ಯಕ್ತಿಗಳು ನಿಮ್ಹಾನ್ಸ್ ಅಥವಾ ತತ್ಸಮಾನ ಸಂಸ್ಥೆಗಳಿಂದ ಬುದ್ಧಿಮಾಂದ್ಯತೆ ಬಗ್ಗೆ ದೃಢೀಕರಣಪತ್ರ ಹೊಂದಿರಬೇಕು. • ನ್ಯಾಯಾಲಯದ ಆದೇಶದ ಮೇರೆಗೆ ಹಾಗೂ ಪೊಲೀಸ್ ಠಾಣೆಗಳ ಮೂಲಕ ಬರುವಂತಹ ಬುದ್ಧಿಮಾಂದ್ಯ ವ್ಯಕ್ತಿಗಳನ್ನು ದಾಖಲಿಸಿಕೊಳ್ಳಲಾಗುವುದು. • ಇತರೆ ಸರ್ಕಾರಿ ಸಂಸ್ಥೆಗಳಿಂದ ವರ್ಗಾವಣೆ ಆದಂತಹ ವ್ಯಕ್ತಿಗಳನ್ನು ಸಹ ದಾಖಲಿಸಿ ಕೊಳ್ಳಲಾಗುವುದು.	ಕಲ್ಪಿಸಲಾಗುತ್ತಿದೆ.	ರಬೇಕು. • ನ್ಯಾಯಾಲಯದ ಆದೇಶದ ಮೇರೆಗೆ ಹಾಗೂ ಪೊಲೀಸ್ ಠಾಣೆಗಳ ಮೂಲಕ ಬರುವಂತಹ ಬುದ್ಧಿಮಾಂದ್ಯ ವ್ಯಕ್ತಿಗಳನ್ನು/ ಮಹಿಳೆಯರನ್ನು ದಾಖಲಿಸಿಕೊಳ್ಳಲಾಗುವುದು	
10	ಮಾನಸಿಕ ಸವಾಲಿಗೊಳಗಾದವರಿಗಾಗಿ ನಿವಾಸಿ ಗೃಹಗಳು	ಮಾನಸಿಕ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದು ಗುಣಮುಖರಾದ ಮಾನಸಿಕ ಅಸ್ವಸ್ಥರು ಸಮಾಜದ ಮುಖ್ಯವಾಹಿನಿಯಲ್ಲಿ ಸೇರ್ಪಡೆಗೊಳ್ಳುವ ಮುನ್ನ ಅವರಿಗೆ ತರಬೇತಿ ಹಾಗೂ ಆಪ್ತ ಸಮಾಲೋಚನೆ ನೀಡಿ ಪುನರ್ವಸತಿ ಕಲ್ಪಿಸುವ	• ಮಾನಸಿಕ ಅಸ್ವಸ್ಥರು ಅಂದರೆ ಅಂಗವಿಕಲರ ಅಧಿನಿಯಮ 2016ರಲ್ಲಿ ತಿಳಿಸಿರುವ ವ್ಯಾಖ್ಯಾನಕ್ಕೆ ಒಳಪಟ್ಟವರು.	–	–	ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು

		ಉದ್ದೇಶದಿಂದ ಅಲ್ಪಾವಧಿ ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ. ಮಾನಸ ಕೇಂದ್ರದಲ್ಲಿ ಮಾನಸಿಕ ಅಸ್ವಸ್ಥರಿಗೆ ಅವಶ್ಯಕವಾಗಿ ಬೇಕಾಗಿರುವ ಆರೋಗ್ಯ, ಪೋಷಣೆ ಮತ್ತು ಆಶ್ರಯವನ್ನು ಒದಗಿಸುವುದು. ಈ ಮಾನಸ ಕೇಂದ್ರಗಳಲ್ಲಿ ಮಹಿಳೆಯರಿಗೆ ಆದ್ಯತೆ ನೀಡಲಾಗುವುದು.	• ಫಲಾನುಭವಿಯು ಮಾನಸಿಕ ಅಸ್ವಸ್ಥರಾಗಿದ್ದು ಅವರ ಅಂಗವಿಕಲತೆಯು ಕನಿಷ್ಠ ಶೇಕಡ 40 ರಷ್ಟು ಇರತಕ್ಕದ್ದು. • ಫಲಾನುಭವಿಯ ಕುಟುಂಬದ ವಾರ್ಷಿಕ ಆದಾಯ ನಗರ ಪ್ರದೇಶಗಳಲ್ಲಿ 24,000 ಮತ್ತು ಗ್ರಾಮೀಣ ಪ್ರದೇಶದಲ್ಲಿ 11,500 ರೂಗಳಿಗಿಂತ ಕಡಿಮೆ ಇರತಕ್ಕದ್ದು. • ರಸ್ತೆಗಳಲ್ಲಿ ಓಡಾಡುವ (Wandering) ನಿರ್ಗತಿಕ ಮಾನಸಿಕ ಅಸ್ವಸ್ಥರನ್ನು ಈ ಕೇಂದ್ರಗಳಿಗೆ ಸೇರಿಸಿ ಕೊಳ್ಳಲಾಗುವುದು. • ರಾಜ್ಯ ಉಚ್ಚ ನ್ಯಾಯಾಲಯ ಮತ್ತು ಅಧೀನ ನ್ಯಾಯಾಲಯ ಗಳು ಆದೇಶಿಸುವ ವ್ಯಕ್ತಿ ಗಳನ್ನು ಸಹ ಈ ಕೇಂದ್ರಗಳಿಗೆ ಸೇರಿಸಕೊಳ್ಳ ಲಾಗುವುದು			
11	ಉದ್ಯೋಗಸ್ಥ ಅಂಗವಿಕಲ ಮಹಿಳೆಯರ ಮತ್ತು ವಿದ್ಯಾರ್ಥಿನಿಯರ	ಗ್ರಾಮೀಣ ವಿಕಲಚೇತನ ಯುವತಿಯರ ಶಿಕ್ಷಣ ಮತ್ತು ಉದ್ಯೋಗಕ್ಕೆ ಪ್ರೋತ್ಸಾಹ ನೀಡಲು 24 ಜಿಲ್ಲೆಗಳಲ್ಲಿ 26 ಮಹಿಳಾ ವಸತಿ ನಿಲಯಗಳು	ಈ ವಸತಿ ನಿಲಯಗಳಲ್ಲಿ ಬಡತನ ರೇಖೆಗಿಂತ ಕೆಳಗಿರುವ ಕುಟುಂಬದ ಅಂಗವಿಕಲ ಉದ್ಯೋಗಸ್ಥ	ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದೊಂದಿಗೆ ಈ ಯೋಜನೆಯನ್ನು ನಡೆಸಲಾಗುತ್ತಿದೆ.	ಈ ವಸತಿ ನಿಲಯದಲ್ಲಿ ಪ್ರವೇಶ ಪಡೆದಿರುವ ವಿದ್ಯಾರ್ಥಿನಿಯರು ಇತರೆ ಯಾವುದೇ ತರಹದ	ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಗಳು

	ವಸತಿ ನಿಲಯಗಳು	ಕಾರ್ಯನಿರ್ವಹಿಸುತ್ತಿದ್ದು, ಸದರಿ ವಸತಿನಿಲಯದಲ್ಲಿ ಉದ್ಯೋಗಸ್ಥ ವಿಕಲಚೇತನ ಮಹಿಳೆಯರಿಗೆ ಹಾಗೂ ವಿದ್ಯಾರ್ಥಿನಿಯರಿಗೆ ಸೌಲಭ್ಯವನ್ನು ಕಲ್ಪಿಸಲಾಗಿದೆ.	ಮಹಿಳೆಯರು/ ವಿದ್ಯಾರ್ಥಿನಿಯರು/ ವೃತ್ತಿಪರ ತರಬೇತಿ ಪಡೆಯುತ್ತಿರುವ ಮಹಿಳೆಯರಿಗೆ ಮಾತ್ರ. ಊಟ ಮತ್ತು ವಸತಿ ಸೌಲಭ್ಯ ಕಲ್ಪಿಸಲಾಗಿರುತ್ತದೆ.		ಶಿಷ್ಯವೇತನವನ್ನು ಪಡೆಯಲು ಅರ್ಹರಿರುವುದಿಲ್ಲ,	
12	ಸಾಧನ ಸಲಕರಣೆಗಳು	ಅಂಗವಿಕಲರ ದೈನಂದಿನ ಚಟುವಟಿಕೆಗಳಿಗೆ ಅಗತ್ಯುವಾಗಿರುವ ತ್ರಿಚಕ್ರವಾಹನಗಳು, ಶ್ರವಣ ಸಾಧನಗಳು, ಕೃತಕ ಅಂಗಾಂಗಗಳು, ಬ್ರೈಲ್ ಗಡಿಯಾರಗಳು, ದೃಷ್ಠಿದೋಷವುಳ್ಳವರು ಉಪಯೋಗಿಸುವ ಬಿಳಿ ಕೋಲುಗಳನ್ನು ಉಚಿತವಾಗಿ ವಿತರಿಸುವುದು.	• ಅಂಗವಿಕಲ ಅಭ್ಯರ್ಥಿಯು ಕನಾ೯ಟಕ ರಾಜ್ಯದಲ್ಲಿ 10 ವರ್ಷಗಳಿಂದ ವಾಸ ಮಾಡುತ್ತಿರ ಬೇಕು. • ಅಂಗವಿಕಲ ಅಭ್ಯರ್ಥಿಯ ಕುಟುಂಬದ ವಾರ್ಷಿಕ ಆದಾಯ ನಗರ ವಾಸಿಯಾಗಿದ್ದಲ್ಲಿ ರೂ.24,000 ಮತ್ತು ಗ್ರಾಮಿಣ ವಾಸಿಯಾಗಿದ್ದಲ್ಲಿ ರೂ.11,500 ಮೀರಿರಬಾರದು. • ಈ ಹಿಂದೆ ಸರ್ಕಾರದ ವತಿಯಿಂದಾಗಲಿ ಅಥವಾ ಸಂಘ ಸಂಸ್ಥೆಗಳಿಂದಾಗಲೀ ಸಹಾಯಧನ/ಸಾಧನಸಲಕರಣೆ ಪಡೆದಿರಬಾರದು.	ಗರಿಷ್ಠ ರೂ. 15,000/- ಗಳವರೆಗೆ ಉಚಿತವಾಗಿ ಸಾಧನ ಸಲಕರಣೆಗಳನ್ನು ಮಂಜೂರು ಮಾಡಲಾಗುವುದು.	• ಅಂಗವಿಕಲತೆ ಹೊಂದಿರುವ ಬಗ್ಗೆ ಸಂಬಂಧಪಟ್ಟ ವೈದ್ಯಕೀಯ ಮಂಡಳಿಯಿಂದ ಪಡೆದ ದೃಡೀಕರಣ ಒದಗಿಸಬೇಕು.	ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು

13	ಟಾಕಿಂಗ್ ಲ್ಯಾಪ್‌ಟಾಪ್	ಅಂಧ ವಿಕಲಚೇತನ ವಿದ್ಯಾರ್ಥಿಗಳು ಇತ್ತೀಚಿನ ತಂತ್ರಜ್ಞಾನ ಮತ್ತು ತಂತ್ರಾಂಶದ ಉಪಯೋಗದಿಂದ ಉನ್ನತ ಶಿಕ್ಷಣವನ್ನು ಹೊಂದಲು ಅನುಕೂಲವಾಗುವಂತೆ ಟಾಕಿಂಗ್ ಲ್ಯಾಪ್‌ಟಾಪ್ ಯೋಜನೆಯನ್ನು ಜಾತಿಗೆ ತರಲಾಗಿದೆ.	• ಜಿಲ್ಲಾ ಮಟ್ಟದಲ್ಲಿ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ರಚಿಸಲಾಗುವ ಸಮಿತಿ ಮೂಲಕ ಆಯ್ಕೆ ಮಾಡಲಾಗುವುದು. • ಯೋಜನೆಯ ಸೌಲಭ್ಯ ಪಡೆಯಲು ಯಾವುದೇ ಆದಾಯಮಿತಿ ಇರುವುದಿಲ್ಲ.	ಅಂಧ ವಿಕಲಚೇತನ ವಿದ್ಯಾರ್ಥಿಗಳು ಇತ್ತೀಚಿನ ತಂತ್ರಜ್ಞಾನ ಮತ್ತು ತಂತ್ರಾಂಶದ ಉಪಯೋಗದಿಂದ ಉನ್ನತ ಶಿಕ್ಷಣವನ್ನು ಹೊಂದಲು ಅನುಕೂಲವಾಗುವಂತೆ ಟಾಕಿಂಗ್ ಲ್ಯಾಪ್‌ಟಾಪ್ ವಿತರಿಸಲಾಗುತ್ತಿದೆ	• ಜಿಲ್ಲಾ ಮಟ್ಟದಲ್ಲಿ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ರಚಿಸಲಾಗುವ ಸಮಿತಿ ಮೂಲಕ ಆಯ್ಕೆ ಮಾಡಲಾಗುವುದು. • ವ್ಯಾಸಂಗ ಮಾಡುತ್ತಿರುವ ಬಗ್ಗೆ ಸಂಬಂಧಿತ ಕಾಲೇಜಿನ ಪ್ರಾಂಶುಪಾಲರಿಂದ ದೃಢೀಕರಣ ಪತ್ರ ಒದಗಿಸಬೇಕು. • ಸರ್ಕಾರ ನೀಡುವ ಲ್ಯಾಪ್‌ಟಾಪ್‌ನ್ನು ಯಾವುದೇ ಕಾರಣಕ್ಕೂ ಪರಭಾರೆ ಮಾಡಬಾರದು. • ಜೀವಿತ ಕಾಲದಲ್ಲಿ ಒಂದು ಬಾರಿ ಈ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ. • ಬೇರೆ ಇಲಾಖೆಗಳು ಅಥವಾ ಸಂಘ ಸಂಸ್ಥೆಗಳಿಂದ ಲ್ಯಾಪ್‌ಟಾಪ್ ಪಡೆದಿದ್ದಲ್ಲಿ ಅರ್ಹರಿರುವುದಿಲ್ಲ. ಈ ಬಗ್ಗೆ ದೃಢೀಕರಣವನ್ನು ನೀಡಬೇಕು.	ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು

14	ಯಂತ್ರಚಾಲಿತ ದ್ವಿಚಕ್ರವಾಹನಗಳು	ರಾಜ್ಯದ 2011ರ ಜನಗಣತಿಯ ಪ್ರಕಾರ 20 ರಿಂದ 60ರ ವಯೋಮಾನದ 166726 ದೈಹಿಕ ವಿಕಲಚೇತನರಲ್ಲಿ ಶೇ.30 ರಷ್ಟು ವಿಕಲಚೇತನರು ತೀವ್ರತರನಾದ ವಿಕಲಚೇತನರಾಗಿರುತ್ತಾರೆ. ಅವರುಗಳು ಉದ್ಯೋಗ ನಿರ್ವಹಿಸುವ / ಉನ್ನತ ಶಿಕ್ಷಣ ವ್ಯಾಸಂಗ ಮಾಡುತ್ತಿರುವ ಕಾಲೇಜುಗಳಿಗೆ ಒಂದು ಸ್ಥಳದಿಂದ ಇನ್ನೊಂದು ಸ್ಥಳಕ್ಕೆ ಹೋಗಿ ಬರಲು ಚಲನವಲನಕ್ಕೆ ಅಡೆತಡೆಗಳಿರುತ್ತವೆ. ಆದ್ದರಿಂದ ಅವರ ಚಲನವಲನಕ್ಕೆ ಅನುಕೂಲವಾಗುವಂತೆ ಯಂತ್ರಚಾಲಿತ ದ್ವಿಚಕ್ರ ವಾಹನ ನೀಡುವ ಯೋಜನೆಯನ್ನು 2014-15ನೇ ಸಾಲಿನಿಂದ ಪ್ರಾರಂಭಿಸಲಾಗಿದೆ.	ದೈಹಿಕ ವಿಕಲಚೇತನರು ಶೇ. 75% ಕ್ಕಿಂತ ಹೆಚ್ಚಿನ ದೈಹಿಕ ವಿಕಲಚೇತನರಾಗಿರಬೇಕು ಹಾಗೂ ಸೊಂಟದ ಕೆಳಗೆ ಅಂದರೆ ಎರಡು ಕಾಲುಗಳಲ್ಲಿ ಸ್ವಾದೀನ ಕಳೆದುಕೊಂಡಿರುವ ಎರಡು ಕೈಗಳು ಸ್ವಾಧೀನದಲ್ಲಿರುವ ಹಾಗೂ ಇತರೆ ಎಲ್ಲಾ ರೀತಿಯಲ್ಲಿ ಸದೃಢವಾಗಿರುವ ವಿಕಲಚೇತನರಾಗಿರಬೇಕು. ಎಂಬುದರ ಬದಲಾಗಿ "ಅಪಘಾತ ಅಥವಾ ಅನಾರೋಗ್ಯ ಅಥವಾ ಹುಟ್ಟಿನಿಂದ ಒಂದು ಅಥವಾ ಎರಡು ಕಾಲುಗಳನ್ನು ಕಳೆದುಕೊಂಡ ಅಥವಾ ಸ್ವಾದೀನ ಇಲ್ಲದಿರುವ ಹಾಗೂ ಅಂಗವೈಕಲ್ಯತೆಯ ಪ್ರಮಾಣ ಶೇ. 75ಕ್ಕಿಂತ ಹೆಚ್ಚು ಇದ್ದು, ಎರಡು ಕೈಗಳು ಸ್ವಾಧೀನವಾಗಿರುವ ಮತ್ತು ಇತರೆ ಎಲ್ಲಾ ರೀತಿಯಲ್ಲಿ ದೈಹಿಕವಾಗಿ ಸದೃಢವಾಗಿರುವ ವಿಶೇಷಚೇತನರಿಗೆ ಪ್ರಥಮ ಆದ್ಯತೆ" ಎಂದು		• ಈ ಯೋಜನೆಯ ಸೌಲಭ್ಯ ಪಡೆಯಲು ಕುಟುಂಬದ ವಾರ್ಷಿಕ ಆದಾಯ ರೂ.2 ಲಕ್ಷಗಳಿಗಿಂತ ಕಡಿಮೆಯಿರಬೇಕು. • ಅಂಗವಿಕಲರ ಅಧಿನಿಯಮದಲ್ಲಿ ಸೂಚಿಸಿರುವ ಹಾಗೂ ವೈದ್ಯಕೀಯ ಪ್ರಾಧಿಕಾರದಿಂದ ನೀಡಿರುವ ಗುರುತಿನ ಚೀಟಿಯೊಂದಿಗೆ ದೃಢೀಕೃತ ವೈದ್ಯಕೀಯ ಪ್ರಮಾಣ ಪತ್ರ ಸಲ್ಲಿಸಬೇಕು. ಇತರ ಇಲಾಖೆಗಳು ಅಥವಾ ಸಂಘ ಸಂಸ್ಥೆಗಳಿಂದ ಯಂತ್ರಚಾಲಿತ ದ್ವಿಚಕ್ರವಾಹನ ಪಡೆದಿದ್ದಲ್ಲಿ ಅಂತಹವರು ಅರ್ಹರಾಗಿರುವುದಿಲ್ಲ.	ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು

			ಸೇರಿಸಿ ಓದಿಕೊಳ್ಳತಕ್ಕದ್ದು ಎಂದು ಸೇರ್ಪಡೆ ಆದೇಶವನ್ನು ಹೊರಡಿಸಲಾಗಿದೆ.			
15	ಸಾಧನೆ	ಅಂಗವಿಕಲರು ಇತರೆ ಸಾಮಾನ್ಯ ಜನರಂತೆ ಕ್ರೀಡೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಲು ಸಮಾಜದ ಮುಖ್ಯವಾಹಿನಿಯಲ್ಲಿ ಸೇರುವಂತೆ ಅವಕಾಶ ಕಲ್ಪಿಸಲು ಈ ಯೋಜನೆಯನ್ನು ರೂಪಿಸಲಾಗಿದೆ. ಈ ಯೋಜನೆಯ ಅಡಿಯಲ್ಲಿ ರಾಷ್ಟೀಯ ಮತ್ತು ಅಂತರಾಷ್ಟ್ರೀಯ ಮಟ್ಟದ ಕ್ರೀಡಾ ಸ್ಪರ್ಧೆಯಲ್ಲಿ ಭಾಗವಹಿಸಿದ ಕ್ರೀಡಾ ಪಟುಗಳಿಗೆ ಗರಿಷ್ಟ ರೂ.30,000/- ಗಳವರೆಗೆ ಧನ ಸಹಾಯ ನೀಡಲಾಗುವುದು.	ಕ್ರೀಡೆಯಲ್ಲಿ ಭಾಗವಹಿಸಿದ ನಂತರ, ಭಾಗವಹಿಸಲು ಆಹ್ವಾನಿಸಿರುವವರ ಮಾಹಿತಿ ಹಾಗೂ ಪ್ರಯಾಣದ ವೆಚ್ಚದ ಹಾಗೂ ಇತರೆ ವೆಚ್ಚದ ಮೂಲ ದಾಖಲಾತಿಗಳೊಂದಿಗೆ ಪ್ರಸ್ತಾವನೆ ಸಲ್ಲಿಸತಕ್ಕದ್ದು. • ಪ್ರಸ್ತಾವನೆ ಪರಿಶೀಲಿಸಿದ ನಂತರ ಸಹಾಯಧನವನ್ನು ಮಂಜೂರು ಮಾಡಲಾಗುವುದು.	ರೂ. 50,000/-	• ಕ್ರೀಡೆಯಲ್ಲಿ ಭಾಗವಹಿಸಿದ ನಂತರ, ಭಾಗವಹಿಸಲು ಆಹ್ವಾನಿಸಿರುವವರ ಮಾಹಿತಿ ಹಾಗೂ ಪ್ರಯಾಣದ ವೆಚ್ಚದ ಹಾಗೂ ಇತರೆ ವೆಚ್ಚದ ಮೂಲ ದಾಖಲಾತಿ ಗಳೊಂದಿಗೆ ಪ್ರಸ್ತಾವನೆಯನ್ನು 45 ದಿನಗಳ ಮುಂಚೆ ಜಿಲ್ಲಾ ಕಛೇರಿಗೆ ಸಲ್ಲಿಸತಕ್ಕದ್ದು. • ಪ್ರಸ್ತಾವನೆ ಪರಿಶೀಲಿಸಿದ ನಂತರ ಸಹಾಯಧನವನ್ನು ಮಂಜೂರು ಮಾಡಲಾಗುವುದು.	ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಗಳು
16	ಪ್ರತಿಭೆ	ಅಂಗವಿಕಲರ ಕ್ಷೇಮಾಭಿವೃದ್ಧಿ ಕಾರ್ಯಕ್ರಮಗಳಲ್ಲಿ ತೊಡಗಿರುವ ಸ್ವಯಂ ಸೇವಾ ಸಂಸ್ಥೆಗಳು, ನೋಂದಾಯಿತ ಸಾಂಸ್ಕೃತಿಕ ಸ್ವಯಂ ಸೇವಾ ಸಂಸ್ಥೆಗಳು ಅಂಗವಿಕಲ ಕಲಾವಿದರನ್ನು ಒಳಗೊಂಡು ಏರ್ಪಡಿಸುವ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ 'ಪ್ರತಿಭೆ' ಯೋಜನೆಯಡಿ ದಿ:18/09/1996ರ ಆದೇಶದನ್ವಯ ಗರಿಷ್ಠ ಮೊತ್ತ ರೂ.10,000/- ಸಹಾಯಧನವನ್ನು	• ಜಿಲ್ಲೆಯ ಕಲಾವಿದರನ್ನು ಆಯಾ ಜಿಲ್ಲೆಯಲ್ಲಿ ಸ್ಥಳೀಯ ಕಲಾವಿದರೆಂದು ಪರಿಗಣಿಸಲಾಗುವುದು. • ಪ್ರಾಯೋಜಿತ ಕಾರ್ಯಕ್ರಮ ನೀಡುವ ಕಲಾವಿದರು ಅಲ್ಲದೇ ಪ್ರಾಯೋಜಿತ	ಸಂಸ್ಥೆಗಳ ಮೂಲಕ ನಡೆಸುವ ಸಾಂಸ್ಕೃತಿ ಕಾರ್ಯಕ್ರಮಕ್ಕೆ ಗರಿಷ್ಠ ಮೊತ್ತ ರೂ.10,000/- ಸಹಾಯಧನವನ್ನು ನೀಡಲಾಗುತ್ತಿದೆ. ವೈಯಕ್ತಿಕವಾಗಿ ನೀಡುವ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ತಲಾ ರೂ.2000/-	ಕಾರ್ಯಕ್ರಮ ನಡೆದಿರುವ ಬಗ್ಗೆ ಸೂಕ್ತ ವಿವರಗಳನ್ನು ಹಾಗೂ ಅಗತ್ಯವಿರುವ ದಾಖಲೆಗಳನ್ನು ಪಡೆದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಾಯೋಜಿತ ಕಾರ್ಯಕ್ರಮ ಗಳಿಗೆ ಸಹಾಯಧನವನ್ನು ಮಂಜೂರು ಮಾಡುವರು.	ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಗಳು

		ನೀಡಲಾಗುತ್ತಿದ್ದು, ದಿನಾಂಕ:7/6/2014ರ ಆದೇಶದಲ್ಲಿ ವಿಕಲಚೇತನರು ವೈಯಕ್ತಿಕವಾಗಿ ನೀಡುವ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ತಲಾ ರೂ.2000/- ಸಹಾಯಧನ ನೀಡಲು ಸರ್ಕಾರವು ಮಂಜೂರಾತಿ ನೀಡಿದೆ.	ಕಾರ್ಯಕ್ರಮಗಳನ್ನು ಪಡೆಯಲು ಉದ್ದೇಶಿಸಿರುವ ನೊಂದಾಯಿತ ಸಂಸ್ಥೆಯ ಕಲಾವಿದರು ಹಾಗೂ ಕಾರ್ಯಕ್ರಮದ ಕುರಿತು ಎಲ್ಲಾ ವಿವರಗಳೊಂದಿಗೆ ಸಂಬಂಧಪಟ್ಟ ಜಿಲ್ಲೆಯ ಅಂಗವಿಕಲರ ಕಲ್ಯಾಣಾಧಿಕಾರಿಗಳಿಗೆ ಕನಿಷ್ಠ 1 ತಿಂಗಳ ಮೊದಲು ಅರ್ಜಿಯನ್ನು ಸಲ್ಲಿಸತಕ್ಕದ್ದು.	ಸಹಾಯಧನ ನೀಡಲಾಗುತ್ತಿದೆ.		
17	ಅಂಗವಿಕಲರ ಗ್ರಾಮೀಣ ಪುನರ್ವಸತಿ ಯೋಜನೆ	ರಾಜ್ಯದಲ್ಲಿರುವ ಎಲ್ಲಾ ಅಂಗವಿಕಲರಿಗೆ ಅವರ ವಾಸಸ್ಥಳದಲ್ಲಿಯೇ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಪುನರ್ವಸತಿ ಸೇವೆಯನ್ನು ಒದಗಿಸಲು ಅವಕಾಶ ಕಲ್ಪಿಸಲು. ಅಂಗವಿಕಲ ವ್ಯಕ್ತಿಯು ತಾನು ವಾಸಿಸುವ ಸ್ಥಳದಲ್ಲಿಯೇ ಎಲ್ಲರಂತೆ ಸಮನ್ಯ ಜೀವನ ನಿರ್ವಹಿಸುವಂತಾಗಲು ಅಗತ್ಯವಿರುವ ಸೇವೆಗಳನ್ನು ಅವರಿರುವಲ್ಲಿಯೇ ಪೂರೈಸುವುದು. ಅಂಗವಿಕಲರಲ್ಲಿರುವ ಶಕ್ತಿ ಸಾಮರ್ಥ್ಯಗಳನ್ನು ಗುರುತಿಸಿ, ಅವರ ಜೀವನ ಮಾರ್ಗೋಪಾಯಗಳನ್ನು ಕಂಡು ಹಿಡಿಯುವುದು ಹಾಗೂ ಅವರು ಸಮಾಜದಲ್ಲಿ ಬದುಕಲು ಸಮಾನ ಅವಕಾಶ ಒದಗಿಸುವುದು.	• ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು ಸ್ಥಳೀಯ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಾಸಿಸುತ್ತಿರಬೇಕು (ಸ್ಥಳೀಯರಾಗಿರಬೇಕು) • ವಯೋಮಿತಿ 18-45 ವರ್ಷದ ಆರೋಗ್ಯವಂತರು • ವಿದ್ಯಾರ್ಹತೆ- ಎಸ್.ಎಸ್.ಎಲ್.ಸಿ ಉತ್ತೀರ್ಣರಾಗಿರಬೇಕು • ಗೌರವಧನದ	4910 ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಗೌರವಧನವನ್ನು ರೂ. 3,000/-ಗಳಿಂದ ರೂ. 6,000/-ಗಳಿಗೆ ಹಾಗೂ 168 ವಿವಿದೋದ್ದೇಶ ಪುನರ್ವಸತಿ ಕಾರ್ಯಕರ್ತರ ಗೌರವಧನವನ್ನು ರೂ. 6,000/-ಗಳಿಂದ ರೂ. 12,000/-ಗಳಿಗೆ ಹೆಚ್ಚಿಸಿ, 112 ನಗರ ಪುನರ್ವಸತಿ ಕಾರ್ಯಕರ್ತರನ್ನು ಮಾಸಿಕ ರೂ. 6,000/-ಗಳ ಗೌರವಧನದೊಂದಿಗೆ ನೇಮಕ ಮಾಡಲಾಗಿದೆ.	• ಅಂಗವಿಕಲರಾಗಿರಬೇಕು -ಭಾಗಶಃ ಅಂಧರಿಗೆ, ಭಗಶಃ ಶ್ರವಣದೋಷವುಳ್ಳವರಿಗೆ (ಮೈಲ್ಡ್ ಮತ್ತು ಮಾಡರೇಟ್) ಮತ್ತು ದೈಹಿಕ ಅಂಗವಿಕಲರಿಗೆ ಅವಕಾಶ ಕಲ್ಪಿಸುವುದು. • ಮೂರು ರೀತಿಯ ಅಂಗವಿಕಲರಿಗೆ ಸಮನಾಗಿ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರನ್ನು ಆಯ್ಕೆ ಮಾಡಬೇಕು. ಒಂದು ವರ್ಗದ ಅಂಗವಿಕಲರು ಆಯ್ಕೆಗೆ	ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಗಳು

			ನೇಮಕತಿಯು ಒಂದು ವರ್ಷದ ನಂತರ ಪುನರ್ ಪರಿಶೀಲನೆಗೆ ಒಳಪಟ್ಟಿರುತ್ತದೆ. ಪುನರ್ ಪರಿಶೀಲನೆಯಲ್ಲಿ ಕೆಲಸ ಕಾರ್ಯಗಳ ನಿರ್ವಹಣೆ, ಅಂಗವಿಕಲರೊಂದಿಗೆ ಸಂಬಂಧ, ವಿವಿಧ ಇಲಾಖೆಗಳೊಂದಿಗೆ/ಸ್ವಯಂ ಸೇವಾ ಸಂಸ್ಥೆ/ಸಮುದಾಯದೆಊಂದಿಗೆ ಇಟ್ಟುಕೊಂಡಿರುವ ಸಂಬಂಧಗಳನ್ನು ಪರಿಶೀಲಿಸಿ ಅಜಿತಿಮ ತೀರ್ಮಾನ ತೆಗೆದುಕೊಳ್ಳಲಾಗುವುದು • ಆಯ್ಕೆ ಮಾಡುವಾಗ ಸರ್ಕಾರ ನಿಗದಿಪಡಿಸಿರುವ ಕರ್ತವ್ಯಗಳನ್ನು ನಿರ್ವಹಿಸಲು ಸಮರ್ಥಕ ಎಂಬ ಬಗ್ಗೆಪರಿಶೀಲಿಸಿಶ ಆಯ್ಕೆ ಮಾಡುವುದು ಹುದ್ದೆಯು ಗೌರವಧನದ ಆಧಾರದ ಮೇಲೆ ಇರುವುದರಿಂದ ಇವರನ್ನು ಯಾವಾಗ		ಲಭ್ಯವಿಲ್ಲದಿದ್ದಲ್ಲಿ ಇನ್ನೋಂದು ವರ್ಗದವರಲ್ಲಿರುವ ಅಂಗವಿಕಲ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಕ್ರಮ ಕೈಗೊಳ್ಳುವುದು • ಮಹಿಳೆಯರಿಗೆ ಆದ್ಯತೆ ನೀಡಬೇಕು • ಅಂಗವಿಕಲತೆಯು ಶೇ.40 ರಷ್ಟಿರಬೇಕು • ಅಂಗವಿಕಲತೆಯ ಬಗ್ಗೆ ವೈದ್ಯಕೀಯ ಮಂಡಲಿಯ ಪ್ರಮಾಣ ಪತ್ರ/ಗುರುತಿನ ಚೀಟಿಯ ದಾಖಲೆ ಪಡೆಯಬೇಕು. • ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸಂಚರಿಸಿ ಮಾಹಿತಿ/ಸೌಲಭ್ಯ ಕಲ್ಪಿಸಲು ಸಮರ್ಥರಾಗಿರಬೇಕು.	

			ಬೇಕಾದರೂ ಕೆಲಸದಿಂದ ತೆಗೆದು ಹಾಕಬಹುದಾಗಿದೆ/ ಬಿಡುಗಡೆ ಮಾಡಬಹುದಾಗಿದೆ.			
18	ಉದ್ಯೋಗ ಕೋಶ	ವಿವಿಧ ಬಗೆಯ ಅಂಗವಿಕಲತೆಯನ್ನು ಹೊಂದಿರುವ ವ್ಯಕ್ತಿಗಳಿಗೆ ಸೂಕ್ತ ತರಬೇತಿಯನ್ನು ನೀಡಿ ಉದ್ಯೋಗವನ್ನು ಒದಗಿಸುವ ಸಲುವಾಗಿ ಹಾಗೂ ಸಾರ್ವಜನಿಕ ವಲಯಗಳಲ್ಲಿ ವಿಕಲಚೇತನರಿಗೆ ಉದ್ಯೋಗ ಅವಕಾಶಗಳನ್ನು ಕಲ್ಪಿಸಿಕೊಡುವ ಉದ್ದೇಶದಿಂದ ಉದ್ಯೋಗ ಕೋಶವನ್ನು ಸರ್ಕಾರದ ಆದೇಶದಂತೆ ಮೆ॥ ಎನೇಬಲ್ ಇಂಡಿಯಾ, ಕೋರಮಂಗಲ, ಬೆಂಗಳೂರು ಸಂಸ್ಥೆಯ ಮುಖಾಂತರ ಬೆಂಗಳೂರಿನಲ್ಲಿ 2013–14ನೇ ಸಾಲಿನಿಂದ ಪ್ರಾರಂಭಿಸಲಾಗಿದೆ.	• ವಿಕಲಚೇತನರು 18–45 ವಯೋಮಾನದವರಾಗಿ ರಬೇಕು • ಅಭ್ಯರ್ಥಿಯು ಕರ್ನಾಟಕ ರಾಜ್ಯದವರಾಗಿರಬೇಕು. • ಅಂಗವಿಕಲತೆಯ ಕುರಿತಂತೆ ವೈದ್ಯಕೀಯ ಮತ್ತು ವಿದ್ಯಾರ್ಹತೆ ಪ್ರಮಾಣ ಪತ್ರ ಸಲ್ಲಿಸಬೇಕು.	• ಆಸಕ್ತ ಅಭ್ಯರ್ಥಿಗಳನ್ನು ಜಿಲ್ಲಾ ಮಟ್ಟದ ಶಿಬಿರಗಳಲ್ಲಿ ಸಂದರ್ಶನದ ಮೂಲಕ ಆಯ್ಕೆ ಮಾಡಿ, • ಅವಶ್ಯಕತೆಗನುಗುಣವಾಗಿ ತರಬೇತಿಯನ್ನು ನೀಡಲಾಗುವುದು. • ವಿಭಾಗ ಮಟ್ಟದಲ್ಲಿ ಪ್ರತಿ ತ್ರೈಮಾಸಿಕಕ್ಕೊಮ್ಮೆ ಉದ್ಯೋಗ ಮೇಳ ಆಯೋಜಿಸಲಾಗುವುದು. ಈ ಮೇಳದಲ್ಲಿ ಅರೆಸರ್ಕಾರಿ/ ಖಾಸಗಿ /ಬಹುರಾಷ್ಟ್ರೀಯ ಕಂಪನಿ ಗಳನ್ನು ಆಹ್ವಾನಿಸಿ ಸದರಿ ಕಂಪನಿಗಳ ಮೂಲಕ ಉದ್ಯೋಗದಾತರಿಗೆ ಉದ್ಯೋಗ ಒದಗಿಸಲು ಅವಕಾಶ ಒದಗಿಸಲಾಗುವುದು. • ಸ್ವಯಂ ಉದ್ಯೋಗ ಮಾಡಲಿಚ್ಛಿಸುವ	• ವಿಕಲಚೇತನರು 18–45 ವಯೋಮಾನದವರಾಗಿರಬೇಕು. • ಅಭ್ಯರ್ಥಿಯು ಕರ್ನಾಟಕ ರಾಜ್ಯದವರಾಗಿರಬೇಕು. • ಅಂಗವಿಕಲತೆಯ ಕುರಿತಂತೆ ವೈದ್ಯಕೀಯ ಮತ್ತು ವಿದ್ಯಾರ್ಹತೆ ಪ್ರಮಾಣ ಪತ್ರ ಸಲ್ಲಿಸಬೇಕು.	ಮೆ॥ ಎನೇಬಲ್ ಇಂಡಿಯಾ, ಕೋರಮಂಗಲ, ಬೆಂಗಳೂರು ಸಂಸ್ಥೆಯ ಮುಖಾಂತರ

				ವಿಕಲಚೇತನರಿಗೆ ಉಚಿತವಾಗಿ ಅಗತ್ಯ ವೃತ್ತಿ ತರಬೇತಿ ಮತ್ತು • ದೈನಂದಿನ ಕೌಶಲ್ಯಗಳನ್ನು ಕಲ್ಪಿಸುವುದು (ಗಿಚಿಛಿಚಿಣುಂಟಿಚಿಟ ಖಿಡುಟಿಟಿಣ ಚಿಟಿಜ ಖಂಜಿಣ ಖಿಞುಟಟ). • 2013-14ನೇ ಸಾಲಿನಲ್ಲಿ 694 ವಿಕಲಚೇತನರಿಗೆ ತರಬೇತಿ ನೀಡಿದ್ದು, ತರಬೇತಿ ಹೊಂದಿದವರಲ್ಲಿ 348 ಜನರಿಗೆ ವಿವಿಧ ಸಂಸ್ಥೆಗಳಲ್ಲಿ ಉದ್ಯೋಗಾವಕಾಶ ಕಲ್ಪಿಸಲಾಗಿದೆ. • 2014-15ನೇ ಸಾಲಿನಲ್ಲಿ 766 ವಿಕಲಚೇತನರಿಗೆ ತರಬೇತಿ ನೀಡಿದ್ದು, ತರಬೇತಿ ಹೊಂದಿದವರಲ್ಲಿ 348 ಜನರಿಗೆ ವಿವಿಧ ಸಂಸ್ಥೆಗಳಲ್ಲಿ ಉದ್ಯೋಗಾವಕಾಶ ಕಲ್ಪಿಸಲಾಗಿದೆ. • 2015-16ನೇ ಸಾಲಿನಲ್ಲಿ 819		

				ವಿಕಲಚೇತನರಿಗೆ ತರಬೇತಿ ನೀಡಿದ್ದು, ತರಬೇತಿ ಹೊಂದಿದವರಲ್ಲಿ 501 ಜನರಿಗೆ ವಿವಿಧ ಸಂಸ್ಥೆಗಳಲ್ಲಿ ಉದ್ಯೋಗಾವಕಾಶ ಕಲ್ಪಿಸಲಾಗಿದೆ • 2016-17ನೇ ಸಾಲಿನಲ್ಲಿ 344 ವಿಕಲಚೇತನರಿಗೆ ತರಬೇತಿ ನೀಡಿದ್ದು, ತರಬೇತಿ ಹೊಂದಿದವರಲ್ಲಿ 104 ವಿಕಲಚೇತನರಿಗೆ ವಿವಿಧ ಸಂಸ್ಥೆಗಳಲ್ಲಿ ಉದ್ಯೋಗಾವಕಾಶ ಕಲ್ಪಿಸಲಾಗಿದೆ		
19	ನಿರುದ್ಯೋಗ ಭತ್ಯೆ		• ಶೇ.40ರಷ್ಟು ಹಾಗೂ ಅದಕ್ಕಿಂತ ಹೆಚ್ಚಿನ ಅಂಗವೈಕಲ್ಯತೆ ಹೊಂದಿರಬೇಕು ಹಾಗೂ ಎಸ್.ಎಸ್.ಎಲ್.ಸಿ. ಮತ್ತು ನಂತರದ ವಿದ್ಯಾರ್ಹತೆ ಹೊಂದಿರಬೇಕು. • 25 ರಿಂದ 45 ವರ್ಷ ವಯೋಮಿತಿಯೊಳಗಿರಬೇಕು. • ಭಾರತದ ಪ್ರಜೆಯಾಗಿದ್ದು,		• ಅರ್ಜಿ ಸಲ್ಲಿಸುವ ದಿನಾಂಕದಂದು ಇರುವಂತೆ ವಯಸ್ಸಿನ ಬಗ್ಗೆ ಎಸ್.ಎಸ್.ಎಲ್.ಸಿ. ಅಂಕಪಟ್ಟಿಯೊಂ ದಿಗೆ ದೃಢೀಕರಣ ಪತ್ರ ಸಲ್ಲಿಸುವುದು. • ಅಂಗವಿಕಲತೆ ಗುರುತಿನ ಚೀಟಿ. • ನಿರುದ್ಯೋಗಿ ಅಂಗವಿಕಲರೆಂಬ ಬಗ್ಗೆ ಪತ್ರಾಂಕಿತ ಅಧಿಕಾರಿಗಳಿಂದ	ಅರ್ಜಿಗಳನ್ನು ಆಯಾ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಗೆ ಸಲ್ಲಿಸತಕ್ಕದ್ದು. ಸ್ವೀಕರಿಸಿದ ಅರ್ಜಿಗಳನ್ನು ಪರಿಶೀಲಿಸಿ ಮಂಜೂರಾತಿಗಾಗಿ ಆಯಾ ಜಿಲ್ಲೆಯ ಉಪನಿರ್ದೇಶಕ

			ಕರ್ನಾಟಕದಲ್ಲಿ ಕನಿಷ್ಠ 10 ವರ್ಷಗಳು ವಾಸವಾಗಿರಬೇಕು. • ಈ ಸೌಲಭ್ಯ ಪಡೆಯಲು ಯಾವುದೇ ಆದಾಯ ಮಿತಿ ಇರುವುದಿಲ್ಲ • ಬೇರೆ ಯಾವುದೇ ಯೋಜನೆಯಡಿ ಅಂದರೆ, ಮಾಸಿಕ ಪೋಷಣಾ ಭೃತೆ/ಶುಲ್ಕ ಮರುಪಾವತಿ/ವಿದ್ಯಾರ್ಥಿ ವೇತನ ಯೋಜನೆಗಳಡಿ ಸೌಲಭ್ಯ ಪಡೆಯುತ್ತಿರುವ ಫಲಾನುಭವಿಗಳು ನಿರುದ್ಯೋಗ ಭತ್ಯೆ ಪಡೆಯಲು ಅರ್ಹರಿರುವುದಿಲ್ಲ. • ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೋಂದಾಯಿತವಾಗಿ 2 ವರ್ಷಗಳು ಕಳೆದಿರಬೇಕು.		ದೃಢೀಕರಣ ಪತ್ರ, • ಅರ್ಜಿದಾರರು ಎಷ್ಟು ವರ್ಷಗಳಿಂದ ನಮೂದಿಸಿರುವ ವಿಳಾಸದಲ್ಲಿ ವಾಸವಾಗಿರುತ್ತಾರೆ ಎಂಬ ದೃಢೀಕರಣ ಪತ್ರ, • ಅರ್ಜಿದಾರರ ಬ್ಯಾಂಕ್ ಖಾತೆ ವಿವರ (ಐ.ಎಫ್.ಎಸ್.ಸಿ ಕೋಡ್, ಬ್ಯಾಂಕ್ ಖಾತೆ ಸಂಖ್ಯೆ, ಬ್ಯಾಂಕ್‌ನ ಹೆಸರು ಮತ್ತು ವಿಳಾಸ).	ರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆರವರಿಗೆ ಸಲ್ಲಿಸುವುದು
20	ಆಧಾರ ಯೋಜನೆ	• ಅಂಗವಿಕಲರಿಗೆ ಸ್ವಯಂ ಉದ್ಯೋಗ ಒದಗಿಸುವ ನಿಟ್ಟಿನಲ್ಲಿ ಆಧಾರ ಯೋಜನೆಯು ಜಾರಿಯಲ್ಲಿದೆ. ಈ ಯೋಜನೆಯ ಅಡಿಯಲ್ಲಿ	ಫಲಾನುಭವಿಗಳಿಗೆ ಶೇ. 40 ಹಾಗೂ ಹೆಚ್ಚಿನ ಅಂಗವಿಕಲತೆ ಇರತಕ್ಕದ್ದು, ಗ್ರಾಮೀಣ ಅಭ್ಯರ್ಥಿಗಳಿಗೆ	• ಅಂಗವಿಕಲರಿಗೆ ಸ್ವಯಂ ಉದ್ಯೋಗ ಒದಗಿಸುವ ನಿಟ್ಟಿನಲ್ಲಿ ಆಧಾರ	ಫಲಾನುಭವಿಗಳಿಗೆ ಶೇ. 40 ಹಾಗೂ ಹೆಚ್ಚಿನ ಅಂಗವಿಕಲತೆ ಇರತಕ್ಕದ್ದು, ಗ್ರಾಮೀಣ ಅಭ್ಯರ್ಥಿಗಳಿಗೆ	• ಆಯಾ ಜಿಲ್ಲಾ ಅಂಗವಿಕಲ ವ್ಯಕ್ತಿಗಳ

